ಶುಕ್ರವಾರ, 26.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 112
Digital Varthe Kannada Daily
Volume 01 - Issue 112
Friday 26.12.2025
Price: 5/- Rs
2 Pages Bangalore

PRGI/RNI: KNKAN/25/A1348


# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ಭೀಕರ ರಸ್ತೆ ದುರಂತ: 9 ಮಂದಿ ದುರ್ಮರಣ



**ತಮಿಳುನಾಡು**: ಚಾಲಕನ ನಿಯಂತ್ರಣ ತಪ್ಪಿದ ಸರ್ಕಾರಿ ಬಸ್ ಎದುರಿನಿಂದ ಬರುತ್ತಿದ್ದ ಎರಡು ಖಾಸಗಿ ವಾಹನಗಳಿಗೆ ಡಿಕ್ಕಿ ಹೊಡೆದ ಪರಿಣಾಮ ಒಂಬತ್ತು ಜನರು ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಕಡಲೂರು ಜಿಲ್ಲೆಯಲ್ಲಿ ನಡೆದಿದೆ. ಟೈರ್ ಸಿಡಿದು ಈ ಅವಘಡ ಸಂಭವಿಸಿದೆ ಎಂದು ತಿಳಿದುಬಂದಿದೆ. ತಿರುಚಿರಾಪಳ್ಳಿಯಿಂದ ಚೆನ್ನೈಗೆ ತೆರಳುತ್ತಿದ್ದ ತಮಿಳುನಾಡು ರಾಜ್ಯ ಸಾರಿಗೆ ಸಂಸ್ಥೆಯ ಬಸ್ ರಾಷ್ಟ್ರೀಯ ಹೆದ್ದಾರಿಯಲ್ಲಿ ವೇಗವಾಗಿ ಚಲಿಸುತ್ತಿತ್ತು. ಈ ವೇಳೆ ಇದ್ದಕ್ಕಿದ್ದಂತೆ ಬಸ್ಸಿನ ಮುಂದಿನ ಟೈರ್ ಸ್ಫೋಟಗೊಂಡಿದೆ.

ಪರಿಣಾಮ ಚಾಲಕನ ನಿಯಂತ್ರಣ ತಪ್ಪಿದ ಬಸ್, ರಸ್ತೆಯ ಮಧ್ಯದ ಡಿವೈಡರ್ ದಾಟಿ ವಿರುದ್ಧ ದಿಕ್ಕಿನ ಕ್ಯಾರೇಜ್‌ವೇಗೆ ನುಗ್ಗಿದೆ. ಇದೇ ಸಮಯದಲ್ಲಿ ಚೆನ್ನೈನಿಂದ ತಿರುಚಿರಾಪಳ್ಳಿ ಕಡೆಗೆ ಹೋಗುತ್ತಿದ್ದ ಒಂದು ಎಸ್ಯುವಿ ಮತ್ತು ಒಂದು ಕಾರಿಗೆ ಬಸ್ ಅತಿ ವೇಗವಾಗಿ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಎರಡು ಖಾಸಗಿ ವಾಹನಗಳು ಸಂಪೂರ್ಣವಾಗಿ ನಜ್ಜುಗುಜ್ಜಾಗಿವೆ. ವಾಹನಗಳಲ್ಲಿದ್ದ 5 ಪುರುಷರು ಮತ್ತು 4 ಮಹಿಳೆಯರು ಸೇರಿದಂತೆ ಒಟ್ಟು 9 ಜನರು ಪ್ರಾಣ ಕಳೆದುಕೊಂಡಿದ್ದಾರೆ. ಮೃತರಲ್ಲಿ 7 ಮಂದಿ ಖಾಸಗಿ ವಾಹನಗಳಲ್ಲಿ ಪ್ರಯಾಣಿಸುತ್ತಿದ್ದವರು ಎಂದು ಪೊಲೀಸರು ಖಚಿತಪಡಿಸಿದ್ದಾರೆ.

ಘಟನೆಯಲ್ಲಿ ಇಬ್ಬರು ಮಕ್ಕಳು ಸೇರಿದಂತೆ ನಾಲ್ವರು ತೀವ್ರವಾಗಿ ಗಾಯಗೊಂಡಿದ್ದು, ಅವರನ್ನು ಕೂಡಲೇ ಸಮೀಪದ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಸದ್ಯ ಗಾಯಾಳುಗಳ ಸ್ಥಿತಿ ಗಂಭೀರವಾಗಿದ್ದು, ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ಸಂತಾಪ ಮತ್ತು ಪರಿಹಾರ ಈ ಭೀಕರ ದುರಂತದ ಬಗ್ಗೆ ತಮಿಳುನಾಡು ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ತೀವ್ರ ಆಘಾತ ವ್ಯಕ್ತಪಡಿಸಿದ್ದಾರೆ. ಮೃತರ ಕುಟುಂಬಸ್ಥರಿಗೆ ಸಾಂತ್ವನ ತಿಳಿಸಿ, ತಕ್ಷಣವೇ ಆರ್ಥಿಕ ನೆರವು ಘೋಷಿಸಿದ್ದಾರೆ. ಮೃತರ ಕುಟುಂಬಕ್ಕೆ ಮುಖ್ಯಮಂತ್ರಿಗಳ ಸಾರ್ವಜನಿಕ ಪರಿಹಾರ ನಿಧಿಯಿಂದ ತಲಾ 3 ಲಕ್ಷ ರೂ. ಪರಿಹಾರ ನೀಡಿದ್ದಾರೆ.

ಗಾಯಾಳುಗಳಿಗೆ ತಲಾ 1 ಲಕ್ಷ ರೂ. ಚಿಕಿತ್ಸಾ ನೆರವು ನೀಡಿದ್ದಾರೆ. ಜೊತೆಗೆ, ಗಾಯಾಳುಗಳಿಗೆ ಯಾವುದೇ ಕೊರತೆಯಿಲ್ಲದೆ ಅತ್ಯುತ್ತಮ ವೈದ್ಯಕೀಯ ಸೇವೆ ಒದಗಿಸುವಂತೆ ಕಡಲೂರು ಜಿಲ್ಲಾಡಳಿತ ಮತ್ತು ಆರೋಗ್ಯ ಇಲಾಖೆಗೆ ಸಿಎಂ ಖಡಕ್ ಸೂಚನೆ ನೀಡಿದ್ದಾರೆ. ಅಪಘಾತದ ನಂತರ ರಾಷ್ಟ್ರೀಯ ಹೆದ್ದಾರಿಯಲ್ಲಿ ಕೆಲಕಾಲ ಸಂಚಾರ ಅಸ್ತವ್ಯಸ್ತಗೊಂಡಿತ್ತು. ಜಿಲ್ಲಾ ಹಿರಿಯ ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗಾಗಿ ಕಳುಹಿಸಲಾಗಿದ್ದು, ಈ ಸಂಬಂಧ ಪ್ರಕರಣ ದಾಖಲಿಸಿಕೊಳ್ಳಲಾಗಿದೆ.

## ಮೃತರ ಕುಟುಂಬಕ್ಕೆ ರಾಜ್ಯ ಸರ್ಕಾರದಿಂದ 5 ಲಕ್ಷ ರೂ. ಪರಿಹಾರ



**ಚಿತ್ರದುರ್ಗ**: ಜಿಲ್ಲೆಯ ಹಿರಿಯೂರು ತಾಲೂಕಿನ ಗೊರ್ಲತ್ತು ಕ್ರಾಸ್ ಬಳಿ ಸಂಭವಿಸಿದ ಭೀಕರ ಬಸ್ ಅಪಘಾತವು ಇಡೀ ದೇಶವನ್ನೇ ಕಂಗೆಡಿಸಿದೆ. ಲಾರಿ ಮತ್ತು ಬಸ್ ನಡುವಿನ ಡಿಕ್ಕಿಯಿಂದಾಗಿ ಸಂಭವಿಸಿದ ಈ ಅಗ್ನಿ ದುರಂತದಲ್ಲಿ ಹಲವು ಪ್ರಯಾಣಿಕರು ಸಜೀವ ದಹನವಾಗಿದ್ದಾರೆ.

ಈ ಘೋರ ಘಟನೆಗೆ ಪ್ರಧಾನಿ ನರೇಂದ್ರ ಮೋದಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವು ಗಣ್ಯರು ತೀವ್ರ ಸಂತಾಪ ಸೂಚಿಸಿದ್ದು, ಸಂತ್ರಸ್ತರಿಗೆ ಆರ್ಥಿಕ ನೆರವು ಘೋಷಿಸಿದ್ದಾರೆ. ದುರಂತದ ಬೆನ್ನಲ್ಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೃತರ ಕುಟುಂಬಗಳಿಗೆ ಪರಿಹಾರ ಘೋಷಿಸಿದ್ದಾರೆ. ಘಟನೆಯಲ್ಲಿ ಮೃತಪಟ್ಟವರ ಕುಟುಂಬಗಳಿಗೆ ತಲಾ 5 ಲಕ್ಷ ರೂಪಾಯಿ ಪರಿಹಾರ ನೀಡಲಾಗುವುದು. ಹಾಗೆಯೇ ಗಾಯಗೊಂಡವರಿಗೆ ತಲಾ 50 ಸಾವಿರ ರೂಪಾಯಿ ಚಿಕಿತ್ಸಾ ವೆಚ್ಚವನ್ನು ಸರ್ಕಾರ ಭರಿಸಲಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ. ಈ ಬಗ್ಗೆ ಸಿಎಂ ಸಿದ್ದರಾಮಯ್ಯ ಅವರು ತಮ್ಮ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡುವ ಮೂಲಕ ಪ್ರತಿಕ್ರಿಯಿಸಿದ್ದಾರೆ. ತಮ್ಮ ಪೋಸ್ಟ್‌ನಲ್ಲಿ ರಜೆಯ ಮೋಜಿನಲ್ಲಿದ್ದವರ ಪ್ರಯಾಣ ಹೀಗೆ ಮಸಣದಲ್ಲಿ ಅಂತ್ಯಗೊಂಡಿದ್ದು ಕೇಳಿ ಎದೆ



ನಡುಗಿತು.

ಘಟನೆಗೆ ನಿಖರ ಕಾರ ಣವೇನು ಎಂಬುದರ ಬಗ್ಗೆ ಉನ್ನತ ಮಟ್ಟದ ತನಿಖೆಗೆ ಆದೇಶಿಸಿದ್ದೇನೆ ಎಂದು ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಈ ದುರಂತಕ್ಕೆ ಪ್ರತಿಕ್ರಿಯೆ ನೀಡಿದ್ದು, ಪ್ರಧಾನ ಮಂತ್ರಿಗಳ ರಾಷ್ಟ್ರೀಯ ಪರಿಹಾರ ನಿಧಿಯಿಂದ ಮೃತರ ಕುಟುಂಬಕ್ಕೆ 2 ಲಕ್ಷ ರೂಪಾಯಿ ಮತ್ತು ಗಾಯಾಳುಗಳಿಗೆ 50 ಸಾವಿರ ರೂಪಾಯಿ ನೆರವು ನೀಡುವುದಾಗಿ ಘೋಷಿಸಿದ್ದಾರೆ. ಕರ್ನಾಟಕದ ಚಿತ್ರದುರ್ಗದಲ್ಲಿ ನಡೆದ ಅಪಘಾತದ ಸುದ್ದಿ ಕೇಳಿ ತೀವ್ರ ನೋವಾಗಿದೆ.

ಪ್ರೀತಿಪಾತ್ರರನ್ನು ಕಳೆದುಕೊಂಡ ಕುಟುಂಬಗಳಿಗೆ ನನ್ನ ಸಾಂತ್ವನಗಳು ಎಂದು ಪ್ರಧಾನಿ ತಮ್ಮ ಎಕ್ಸ್ ಖಾತೆಯಲ್ಲಿ ತಿಳಿಸಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ಕೂಡ ಘಟನಾ ಸ್ಥಳಕ್ಕೆ ಭೇಟಿ ನೀಡುವಂತೆ ಮತ್ತು ಗಾಯಾಳುಗಳಿಗೆ ಸೂಕ್ತ ವೈದ್ಯಕೀಯ ನೆರವು ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಸಾರಿಗೆ ಸಚಿವರು ಖಾಸಗಿ ಬಸ್‌ಗಳ ಸುರಕ್ಷತಾ ಕ್ರಮಗಳ ಬಗ್ಗೆ ವರದಿ ಕೇಳಿದ್ದಾರೆ. ಬೆಂಗಳೂರಿನಿಂದ ಗೋಕರ್ಣಕ್ಕೆ ಹೊರಟಿದ್ದ ಸೀಬರ್ಡ್ ಬಸ್‌ಗೆ ಲಾರಿಯೊಂದು ಡಿಕ್ಕಿ ಹೊಡೆದ ರಭಸಕ್ಕೆ ಡೀಸೆಲ್ ಟ್ಯಾಂಕ್ ಸ್ಫೋಟಗೊಂಡು ಈ ದುರಂತ ಸಂಭವಿಸಿತ್ತು. ಬಸ್ಸಿನಲ್ಲಿದ್ದ ಪ್ರಯಾಣಿಕರು ಹೊರಬರಲಾಗದೆ ಬೆಂಕಿಗೆ ಆಹುತಿಯಾಗಿದ್ದರು. ಲಾರಿ ಚಾಲಕನ ಅಜಾಗರೂಕತೆಯೇ ಈ ಭೀಕರ ಘಟನೆಗೆ ಮುಖ್ಯ ಕಾರಣ ಎಂದು ಪ್ರಾಥಮಿಕ ವರದಿಗಳು ತಿಳಿಸಿವೆ.

## ಡಿಜಿಟಲ್ ಅರೆಸ್ಟ್ ಬಗ್ಗೆ ಜಾಗೃತಿ ವಹಿಸಿ: ಡಾ.ಅನುಚೇತ್




**ನೆಲಮಂಗಲ:** ಡಿಜಿಟಲ್ ಅರೆಸ್ಟ್ ಪ್ರಕರಣಗಳು ಸಮಾಜದಲ್ಲಿ ಹೆಚ್ಚಾಗುತ್ತಿದ್ದು, ಪೋಷಕರು ಹಾಗೂ ವಿದ್ಯಾರ್ಥಿಗಳು ಹೆಚ್ಚು ಗಮನವಹಿಸಿ ಜಾಗೃತರಾಗಿ 'ಬೇಕು ಎಂದು ಪೊಲೀಸ್ ನೇಮಕಾತಿ ವಿಭಾಗ ಡಿಐಜಿಪಿ ಡಾ.ಎಂ.ಎನ್ ಅನುಚೇತ್ ತಿಳಿಸಿದರು.

ತಾಲೂಕಿನ ಕಂಬಯ್ಯನಪಾಳ್ಯ ಗ್ರಾಮದ ಹರ್ಷಶಿಕ್ಷಣ ಸಂಸ್ಥೆ ಆವರಣದಲ್ಲಿ ಶ್ರೀನಿವಾಸ ಚಾರಿಟಬಲ್ ಟ್ರಸ್ಟ್, ಹರ್ಷ ಇಂಟರ್ ನ್ಯಾಷನಲ್ ಪಬ್ಲಿಕ್ ಶಾಲೆಯಿಂದ ಆಯೋಜಿಸಿದ್ದ 13ನೇ ವಾರ್ಷಿಕೋತ್ಸವವನ್ನು ಉದ್ದೇಶಿಸಿ ಮಾತನಾಡಿದರು. ಹರ್ಷ ಸಂಸ್ಥೆಯಲ್ಲಿ ನಮ್ಮ ತಂದೆಯವರು ಕೆಲಸ ಮಾಡುತ್ತಿದ್ದರು. ನಾನು ಆರಂಭದಿಂದ ಸಂಸ್ಥೆಯ ಬೆಳವಣಿಗೆಯನ್ನು ನೋಡಿದ್ದೇನೆ. ಬಾಡಿಗೆ ಕಟ್ಟಡದಿಂದ ಆರಂಭವಾದ ಸಂಸ್ಥೆ ಇಂದು ದೊಡ್ಡ ಮಟ್ಟದಲ್ಲಿ ಬೆಳೆದು ಸ್ವಂತ ಕಟ್ಟಡದಲ್ಲಿ ನರ್ಸಿಂಗ್ ಸೇರಿದಂತೆ ಅನೇಕ ವಿಭಾಗಗಳನ್ನು ಒಳಗೊಂಡಿದೆ. ಸಂಸ್ಥೆಯ ಬೆಳವಣಿಗೆಗೆ ಶಿವಕುಮಾರ್ ಅವರ ಸಂಕಲ್ಪ, ನಿರಂತರ ಪರಿಶ್ರಮ, ಬದ್ಧತೆ ಬಹಳ ಮುಖ್ಯವಾಗಿದೆ ಎಂದರು.

ಮನೆಯಲ್ಲಿ ಜಾಗೃತಿ ಅಗತ್ಯ: ಯುವಕರನ್ನು ಮತ್ತು ವಿದ್ಯಾರ್ಥಿಗಳನ್ನು ಮಾದಕ ವಸ್ತುಗಳಿಂದ ದೂರ ಮಾಡುವ ಅನಿವಾರ್ಯತೆ ಇದೆ. ಮನೆಗಳಲ್ಲಿ ಮೊದಲು ಜಾಗೃತಿ ಮೂಡಬೇಕು. ಸಮಾಜದಲ್ಲಿ ವಿದ್ಯಾರ್ಥಿಗಳಿಗೆ ಶಿಕ್ಷಣ ಎಷ್ಟು ಸುಲಭವಾಗಿ ಶಕ್ತಿ ನೀಡುತ್ತಿದೆ. ಆದರೆ, ಮಾದಕ ವಸ್ತುಗಳು ವಿದ್ಯಾರ್ಥಿಗಳು ಹಾಗೂ ಯುವಕರ ಶಕ್ತಿ ಕುಗ್ಗಿಸಿ ಅವರ ಭವಿಷ್ಯವನ್ನು ನಾಶ ಮಾಡುತ್ತಿದೆ. ಸಾಮಾಜಿಕ ಜಾಲತಾಣದ ಅರಿವು ಹಾಗೂ ಬಳಕೆಯ ಬಗ್ಗೆ ವಿದ್ಯಾರ್ಥಿಗಳ ಮೇಲೆ ಪೋಷಕರು ಹೆಚ್ಚು ನಿಗಾ ವಹಿಸುವುದು ಅಗತ್ಯವಾಗಿದೆ ಎಂದು ಹೇಳಿದರು.

ಹರ್ಷ ಸಮೂಹ ಸಂಸ್ಥೆಗಳ ಛೇರ್ಮನ್ ಶಿವಕುಮಾರ್ ಮಾತನಾಡಿ, ನೆಲಮಂಗಲವೆಂಬ ಗ್ರಾಮೀಣ ಭಾಗದಲ್ಲಿ ಆರಂಭವಾದ ಹರ್ಷ ಸಂಸ್ಥೆ ರಾಷ್ಟ್ರ ಮಟ್ಟದಲ್ಲಿ ಹೆಸರು ಮಾಡಲು ಪೋಷಕರು, ವಿದ್ಯಾರ್ಥಿ, ಶಿಕ್ಷಕರು, ಆಡಳಿತ ಮಂಡಳಿಯ ಬಹುದೊಡ್ಡ ಸಹಕಾರವಿದೆ. ಮುಂದಿನ ದಿನಗಳಲ್ಲಿ ಅನೇಕ ವಿಭಾಗಗಳ ಆರಂಭದಿಂದ ಹರ್ಷ ಸಂಸ್ಥೆ ಮತ್ತಷ್ಟು ವಿಸ್ತಾರವಾಗಲಿದೆ ಎಂದು ಹೇಳಿದರು.

ಗಮನ ಸೆಳೆದು ಮಕ್ಕಳ ನೃತ್ಯ: ಹರ್ಷಸಿ.ಬಿ.ಎಸ್.ಇ ಶಾಲೆಯ ಎಲ್ ಕೆಜಿ, ಯುಕೆಜಿಯಿಂದ 12ನೇ ತರಗತಿ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ಹಾಗೂ ನಗದು ಬಹುಮಾನ ವಿತರಣೆ ಮಾಡಿದ್ದು, ಶಾಲೆಯ ಅತ್ಯುತ್ತಮ ವಿದ್ಯಾರ್ಥಿ, ಶಿಕ್ಷಕರಿಗೆ ಅಭಿನಂದನೆ ಸಲ್ಲಿಸ ಲಾಯಿತು. ಶಾಲಾ ವಿದ್ಯಾರ್ಥಿಗಳು ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿ ಕೊಟ್ಟರು.

ಹರ್ಷ ಸಂಸ್ಥೆ ಉಪಾಧ್ಯಕ್ಷೆ ಗಿರಿಜಾ ಶಿವಕುಮಾರ್, ಕಾರ್ಯದರ್ಶಿ ಹರ್ಷ, ಸಹ ಕಾರ್ಯದರ್ಶಿ ಯಶಸ್, ಪಬ್ಲಿಕ್ ಸ್ಕೂಲ್ ಪ್ರಾಂಶುಪಾಲೆ ಬಿಂದು ಶರ್ಮಾ, ಪ್ರೀ ಸ್ಕೂಲ್ ಪ್ರಾಂಶುಪಾಲೆ ಪೂರ್ಣಿಮಾ ಹರ್ಷ ಕಾಲೇಜು ಸತೀಶ್ ಸೇರಿದಂತೆ ಮತ್ತಿತರರಿದ್ದರು.

## ಸರ್ಕಾರಿ ಶಾಲಾ ಮಕ್ಕಳಿಗೆ ವೈಜ್ಞಾನಿಕ ಜ್ಞಾನ ಚಿಂತನೆ ಬೆಳೆಸುವುದು ಮುಖ್ಯ



ಬೆಂಗಳೂರು: ಸ್ಪರ್ಧಾತ್ಮಕ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ಪ್ರಶ್ನಿಸುವ ಮನೋಭಾವ ಮತ್ತು ನವೀನ ಚಿಂತನೆ ಬೆಳೆಸಲು ಸಹಕಾರಿಯಾಗುತ್ತವೆ ಎಂದು ಅಗಸ್ತ್ಯ ಫೌಂಡೇಶನ್ ವ್ಯವಸ್ಥಾಪಕ ನಿರ್ದೇಶಕ ದೀಲಿಪ್ ಕುಮಾರ್ ಹೇಳಿದರು. ಅವರು ಅಗಸ್ತ್ಯ ಅಂತರಾಷ್ಟ್ರೀಯ ಪ್ರತಿಷ್ಠಾನ ಟೆಕ್ಸಾಸ್ ಇನ್ಸ್ಟ್ರುಮೆಂಟ್ ವಿಜ್ಞಾನ ಕೇಂದ್ರದ ಸಹಯೋಗದಲ್ಲಿ ಬೆಂಗಳೂರು ಕೆಂಗೇರಿ ವಿಜ್ಞಾನ ಕೇಂದ್ರದಲ್ಲಿ ಬೆಂಗಳೂರು ದಕ್ಷಿಣ-1 ಮತ್ತು ದಕ್ಷಿಣ-2 ವಲಯಗಳ ವಿದ್ಯಾರ್ಥಿಗಳಿಗಾಗಿ ವಿಜ್ಞಾನ ಮತ್ತು ತಂತ್ರಜ್ಞಾನ ಕ್ವಿಜ್ ಸ್ಪರ್ಧೆಯನ್ನು ಪೂನಂ ಮಹಲ್‌ನಲ್ಲಿ ಯಶಸ್ವಿಯಾಗಿ ಆಯೋಜಿಸಿ ಮಾತನಾಡಿದರು.

ಆರ್.ಪಿ ಕುಮಾರ್ ಸ್ವಾಮಿ ಮಾತನಾಡಿ ಈ ಸ್ಪರ್ಧೆಯಲ್ಲಿ ಸುಮಾರು 50 ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳು ಭಾಗವಹಿಸಿ, ವಿಜ್ಞಾನ ಹಾಗೂ ತಂತ್ರಜ್ಞಾನ ವಿಷಯಗಳಲ್ಲಿ ತಮ್ಮ ಜ್ಞಾನ ಮತ್ತು ಪ್ರತಿಭೆಯನ್ನು ಪ್ರದರ್ಶಿಸಿದರು.

ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಚಿಂತನೆ ಬೆಳೆಸುವುದು ಮತ್ತು STEM ಕಲಿಕೆಯನ್ನು ಉತ್ತೇಜಿಸುವುದೇ ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿತ್ತು ಎಂದರು.

ಕಾರ್ಯಕ್ರಮವನ್ನು BRC, CRP ಹಾಗೂ DIETನ ಹಿರಿಯ ಉಪನ್ಯಾಸಕರು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು. ಸ್ಪರ್ಧೆಯಲ್ಲಿ ವಿದ್ಯಾರ್ಥಿಗಳು ಉತ್ಸಾಹ ದಿಂದ ಭಾಗವಹಿಸಿ ಕಾರ್ಯ ಕ್ರಮವನ್ನು ಯಶಸ್ವಿಗೊಳಿಸಿದ ನವೀನ್ ಕುಮಾರ್, ಹರಿಪ್ರಸಾದ್, ಸಿ ಕೆ ರಾವ್, ಮುಖ್ಯ ಶಿಕ್ಷಕರ ಸಿದ್ದಲಿಂಗಯ್ಯ, ಶ್ರಯಾಂಕ ಅಮೃತ ಸೇರಿದಂತೆ ಶಿಕ್ಷಕರು ಹಾಗೂ ಆಯೋಜಕರು ವಿದ್ಯಾರ್ಥಿಗಳ ಸ್ಪಂದನೆಗೆ ಮೆಚ್ಚುಗೆ ವ್ಯಕ್ತಪಡಿಸಿದರು.

## ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ ಮಾಡಿದ ಡಾ. ಸಂಗನ ಬಸಪ್ಪ ಬಿರಾದಾರ್

ಪೀಣ್ಯ ದಾಸರಹಳ್ಳಿ : ನೂತನ ವರ್ಷದ ಕ್ಯಾಲೆಂಡರ್ ವಿಶೇಷತೆ ಎಂದರೆ ಅದು ಸಮಯದ ಗಣಿತ, ಸಂಪ್ರದಾಯ ಮತ್ತು ಖಗೋಳಶಾಸ್ತ್ರದ ಸಂಯೋಜನೆ ಯಾಗಿದ್ದು, ಗ್ರೆಗೋರಿಯನ್ ಕ್ಯಾಲೆಂಡರ್ ಜನವರಿ 1ರಂದು ಪ್ರಾರಂಭವಾಗುತ್ತದೆ ಎಂದು ಸಮಾಜ ಸೇವಕ ಚಿಂತಕರು ವಾಗ್ಮಿಗಳು ಮತ್ತು ಬುದ್ದಿಜೀವಿಗಳಾದ ಡಾ. ಸಂಗನ ಬಸಪ್ಪ ಬಿರಾದಾರ್ ಹೇಳಿದರು.



ಚಿಕ್ಕಬಾಣವಾರದ ಶ್ರೀ ವೀರಶೈವ ಲಿಂಗಾಯತ ವೇದಿಕೆಯ ಅಧ್ಯಕ್ಷ ಅಶೋಕ್ ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ಪ್ರಧಾನ ಕಾರ್ಯದರ್ಶಿಯಾದ ಎಂ ಎಚ್ ಪಾಟೀಲ್ ಅವರು ಸ್ವಾಗತ ಕೋರಿದರು. ಎಂ ಎಚ್ ಪಾಟೀಲ್ ಅವರ ಕಚೇರಿಯಲ್ಲಿ ಆಯೋಜಿಸಿದ್ದ ನೂತನ ವರ್ಷದ 2026ನೇ ಸಾಲಿನ ಕ್ಯಾಲೆಂಡರ್ (ತುಗೂ ಪಂಚಾಂಗ) ಬಿಡುಗಡೆ ಸಮಾರಂಭದಲ್ಲಿ ಪಾಲ್ಗೊಂಡು ಕ್ಯಾಲೆಂಡರ್ ಬಿಡುಗಡೆ ಮಾಡಿ ಮಾತನಾಡಿದ ಅವರು ಇದು ರೋಮನ್ ದೇವತೆ 'ಜಾನುಸ್' ಮತ್ತು ಭೂಮಿಯ ಸೌರ ಚಲನೆಯನ್ನು ಆಧರಿಸಿದೆ, ಆದರೆ ಪ್ರಾದೇಶಿಕವಾಗಿ ಭಾರತದಲ್ಲಿ ಯುಗಾದಿ, ಸಂಕ್ರಾಂತಿಗಳು, ದೀಪಾವಳಿ, ಇಸ್ಲಾಮಿಕ್ ಮತ್ತು ಚೈನೀಸ್ ಹೊಸ ವರ್ಷದಂತಹ ವಿಭಿನ್ನ ದಿನಾಂಕಗಳಲ್ಲಿ ಆಚರಿಸಲಾಗುವ ಹಬ್ಬಗಳು ಮತ್ತು ಪಂಚಾಂಗದ ಮಾಹಿತಿ, ಶುಭ-ಅಶುಭ ದಿನಗಳನ್ನು ತಿಳಿಯಲು ಸಹ ಕ್ಯಾಲೆಂಡರ್ ಮುಖ್ಯವಾಗಿದೆ ಎಂದು ಡಾ. ಬಿರಾದಾರ್ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಈ ಸಂದರ್ಭದಲ್ಲಿ ಜನವಿಕಾಸ ಸೌಹಾರ್ದ ಕ್ರೆಡಿಟ್ ಕೋ- ಆಪರೇಟಿವ್ ಸೊಸೈಟಿಯ ಸಂಸ್ಥಾಪಕ ಅಧ್ಯಕ್ಷ ದಯಾನಂದ್, ರವಿಕುಮಾರ್, ಕಾಂತರಾಜ್, ಸಿ ಎಸ್ ಆರಾಧ್ಯ, ವಿರುಪಾಕ್ಷಪ್ಪ ಹಟ್ಟಿ, ತ್ಯಾಗರಾಜ, ಭಗವತಿ, ಅಶೋಕ್ ಪಾಟೀಲ್, ಮುತ್ತುರಾಜ್ ಹಳ್ಳಿಕಿ. ಶಿವಕುಮಾರ್ ಮೇಟಿ ಶ್ರೀಮತಿ ಸುವರ್ಣ ಹಟ್ಟಿ, ಶ್ರೀಮತಿ ಚೈತ್ರ ಶಾರುಶ್ರೀ ಅಣ್ಣಾರಾವ್ ಮತ್ತು ವೀರಶೈವ ಲಿಂಗಾಯತ ವೇದಿಕೆಯ ಅಧ್ಯಕ್ಷರು ಪದಾಧಿಕಾರಿಗಳು ವೀರಶೈವ ಮುಖಂಡರು ಮಹಿಳೆಯರು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು

## ಉತ್ತಮ ನಡತೆ, ಭೌತಿಕ ಬೆಳವಣಿಗೆ ಮತ್ತು ದುಡಿಮೆಯ ಸಾಮರ್ಥ್ಯ ಶಿಕ್ಷಣದಿಂದ ಸಾಧ್ಯ: ಎಂ.ವಿ. ಸತೀಶ್



ಪೀಣ್ಯ ದಾಸರಹಳ್ಳಿ: ಯಾವ ವ್ಯಕ್ತಿಯಲ್ಲಿ ಉತ್ತಮ ನಡತೆ, ಭೌತಿಕ ಬೆಳವಣಿಗೆ ರೂಪಗೊಳ್ಳುತ್ತದೆಯೋ ಹಾಗೆಯೇ ಸ್ವತಃ ದುಡಿಮೆಯಿಂದ ಬದುಕುವ ಸಾಮರ್ಥ್ಯ ಹೊಂದುತ್ತಾನೆಯೋ ಅದು ನಿಜವಾದ ಶಿಕ್ಷಣದಿಂದ' ಎಂದು ಹಿರಿಯ ಉಪ ನೊಂದಣಾಧಿಕಾರಿ ಎಂ.ವಿ. ಸತೀಶ್ ತಿಳಿಸಿದರು.

ಶೆಟ್ಟಿಹಳ್ಳಿಯ ಸರ್.ಎಂ. ವಿಶ್ವೇಶ್ವರಯ್ಯ ವಿದ್ಯಾನಿಕೇತನ ಶಾಲೆಯ ವಾರ್ಷಿಕೋತ್ಸವವಾದ' ಕಾಮನಬಿಲ್ಲು- 2025'ರ ಸಮಾರಂಭದಲ್ಲಿ ಮಾತನಾಡಿದರು. ಆಧುನಿಕ ಶಿಕ್ಷಣ ಎಂಬುದು ಇವತ್ತಿನ ಸಂಬಂಧ, ಭಾವನೆ ಮತ್ತು ನೈತಿಕತೆಗೆ ಹೆಚ್ಚು ಪ್ರಾಮುಖ್ಯತೆ ಕೊಡುತ್ತಿಲ್ಲ ಎಂಬುದೇ ವಿಷಾದನೀಯ. ಉದಾಹರಣೆಗೆ: ಗುರುಗಳು, ತಂದೆ- ತಾಯಿ ಮತ್ತು ಹಿರಿಯ, ಕಿರಿಯರು' ಎಂದು ಹೇಳಿದರು. ಪೋಷಕರು ತಮ್ಮ ಮಕ್ಕಳು ಎಂತಹ ಶಿಕ್ಷಣ, ಜ್ಞಾನ ಸಂಪಾದನೆ ಮಾಡಿದ್ದಾರೆ,ಎಷ್ಟು ವಿಷಯದ ಬಗ್ಗೆ ಅರಿತಿದ್ದಾರೆ ಎಂಬುದನ್ನು ಪರಿಗಣಿಸದೆ ಕೇವಲ ಅಂಕಗಳಿಗೆ ಸೀಮಿತರಾಗಿದ್ದಾರೆ' ಎಂದರು. ಸಮಾಜದಲ್ಲಿ ಉತ್ತಮ ಪ್ರಜೆ ಮತ್ತು ಸುಸಂಸ್ಕೃತ ವ್ಯಕ್ತಿಯಾಗಿ ದೇಶದ ಒಳಿತಿಗೆ ಶ್ರಮಿಸುವಂತಾಗಬೇಕು' ಎಂದು ಹೇಳಿದರು.

ಸಮಾರಂಭದಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು. ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಜರುಗಿತು. ಸಮಾರಂಭದಲ್ಲಿ ಶಾಲೆಯ ಮುಖ್ಯ ಶಿಕ್ಷಕಿಯರಾದ ಸುನಂದ ವರ್ಮ ಮತ್ತು ಪ್ರೇಮ, ಅಧ್ಯಕ್ಷೆ ಸಲ್ಲತ್ ಮೇರಿ ಎ, ಕಾರ್ಯದರ್ಶಿ ಎಂ. ನಾಗೇಗೌಡ, ಹಿರಿಯ ಉಪ ನೊಂದಣಾಧಿಕಾರಿ ಎಂ.ವಿ. ಸತೀಶ್, ಖಜಾಂಚಿ ಸಿ.ಎಂ. ಶಿವಕುಮಾರ್, ಕುವೆಂಪು ಕಾಲೇಜಿನ ಪ್ರಾಂಶುಪಾಲ ಕುಮಾರ್, ಸಿಇಓ ಆರೋಗ್ಯಪ್ಪ ಇದ್ದರು.

## 40 ದಿನದ ಶಿಶುವಿನ ಮರ್ಯಾದಾ ಹತ್ಯೆ!?

ಚಿಕ್ಕಬಳ್ಳಾಪುರ: ಜಿಲ್ಲೆಯ ಚೇಳೂರು ಪಟ್ಟಣದಲ್ಲಿ 40 ದಿನದ ನವಜಾತ ಗಂಡು ಶಿಶು ಸಾವಿನ ಪ್ರಕರಣ ಇದೀಗ ತೀವ್ರ ಅನುಮಾನಗಳಿಗೆ ಕಾರಣವಾಗಿದೆ. ಈ ಘಟನೆಯಲ್ಲಿ ಮರ್ಯಾದೆ ಹತ್ಯೆ ಶಂಕೆ ವ್ಯಕ್ತವಾಗಿದ್ದು, ಶಿಶುವಿನ ಸಾವಿನಲ್ಲಿ ಅಜ್ಜಿಯ ಕೈವಾಡವಿರಬಹುದೆಂಬ ಆರೋಪ ಕೇಳಿಬಂದಿದೆ.

ಅಪ್ರಾಪ್ತ ಮೊಮ್ಮಗಳು ಹಿಂದೂ ಯುವಕನನ್ನು ಪ್ರೀತಿಸಿ ಮದುವೆ ಮಾಡಿಕೊಂಡಿದ್ದಕ್ಕೆ ದ್ವೇಷ ಹೊಂದಿದ್ದ ಅನ್ಯಕೋಮಿಗೆ ಸೇರಿದ ಅಜ್ಜಿ, ಮೊಮ್ಮಗಳ 40 ದಿನದ ನವಜಾತ ಶಿಶುವನ್ನು ಕೊಂದಿರಬಹುದೆಂಬ ಶಂಕೆ ವ್ಯಕ್ತವಾಗಿದೆ. ಪ್ರೀತಿಸಿ ಮದುವೆಯಾದ ದಂಪತಿಗೆ ಜನಸಿದ್ದ ಗಂಡು ಮಗು ಡಿಸೆಂಬರ್ 21 ರಂದು ಮೃತಪಟ್ಟಿದೆ. ಸಾವು ಸಂಭವಿಸಿದ ವೇಳೆ ಮಗು ಅಜ್ಜಿ ಬಳಿ ಇತ್ತು. ಆದರೆ, ಈ ಕುರಿತು ಪೊಲೀಸರಿಗೆ ಮಾಹಿತಿ ನೀಡುವ ಅಗತ್ಯವಿಲ್ಲ ಎಂದು ಅಜ್ಜಿ ವಾದಿಸಿದ್ದಾಳೆ ಎನ್ನಲಾಗಿದೆ. ಆದರೆ ತನ್ನ ಮಗುವಿನ ಸಾವಿನಲ್ಲಿ ಅಜ್ಜಿಯ ಕೈವಾಡವಿದೆ ಎಂಬ ಅನುಮಾನ ವ್ಯಕ್ತಪಡಿಸಿದ 17 ವರ್ಷದ ಅಪ್ರಾಪ್ತ ಬಾಲಕಿ, ಚೇಳೂರು ಪೊಲೀಸ್ ಠಾಣೆಗೆ ದೂರು ದಾಖಲಿಸಿದ್ದಾಳೆ.

ಈ ದೂರಿನ ಆಧಾರದ ಮೇಲೆ ಬಿಎನ್‌ಎಸ್ 194 ಸೆಕ್ಷನ್ ಅಡಿ ಯುಡಿಆರ್ (ಅಸಹಜ ಸಾವು) ಪ್ರಕರಣ ದಾಖಲಿಸಲಾಗಿದೆ. ಪ್ರಕರಣದ ಗಂಭೀರತೆಯನ್ನು ಗಮನಿಸಿ ನವಜಾತ ಶಿಶುವಿನ ಮೃತದೇಹವನ್ನು ಹೊರತೆಗೆಯಲಾಗಿದ್ದು, ಚೇಳೂರು ತಹಶಿಲ್ದಾರ್ ಶ್ವೇತಾ ಅವರ ನೇತೃತ್ವದಲ್ಲಿ ಮರಣೋತ್ತರ ಶವ ಪರೀಕ್ಷೆ ನಡೆಸಲಾಗಿದೆ.

ಸುದ್ದಿ ಹಾಗೂ ಜಾಹೀರಾತುಗಳಿಗೆ ಸಂಪರ್ಕಿಸಿ
95387 86812 / 988065534

## KSRTC ಬಸ್‌ನಲ್ಲಿ ಕಳವು: ಸಿನೆಮಾ ಸ್ಟೈಲ್‌ನಲ್ಲಿ ಆರೋಪಿ ಅರೆಸ್ಟ್

**ಚಿಕ್ಕಬಳ್ಳಾಪು**: ಊಟಕ್ಕೆ ನಿಲ್ಲಿಸಿದ್ದ ವೇಳೆ ಬೆಂಗಳೂರು-ಹೈದರಾಬಾದ್ KSRTC ಎಸಿ ಸ್ಲೀಪರ್ ಬಸ್‌ನಲ್ಲಿದ್ದ 55 ಲಕ್ಷ ರೂ. ಹಣ ಕಳವು ಪ್ರಕರಣ ಸಂಬಂಧ ಹುಡಿಬಂಡೆ ಪೊಲೀಸರು ಓರ್ವ ಆರೋಪಿಯನ್ನು ಬಂಧಿಸಿದ್ದಾರೆ. ಉಳಿದ ಮೂವರು ಆರೋಪಿಗಳು ಎಸ್ಕೇಪ್ ಆಗಿದ್ದು, ಕಳುವಾಗಿದ್ದ ಹಣವನ್ನ ಬಂಧಿತನಿಂದ ಜಪ್ತಿ ಮಾಡಲಾಗಿದೆ. ಎಲ್ಲ ಆರೋಪಿಗಳು ಮಧ್ಯಪ್ರದೇಶ ಮೂಲದವರು ಎಂಬುದು ತನಿಖೆ ವೇಳೆ ಬಯಲಾಗಿದೆ. ಪ್ರಕರಣ ಸಂಬಂಧ ಮಧ್ಯ ಪ್ರದೇಶದಲ್ಲಿ ಆರೋಪಿ ಅಸ್ಲಂ ಖಾನ್ ಎಂಬಾತನನ್ನು ಬಂಧಿಸಲಾಗಿದ್ದು, ಕದ್ದ ಹಣವನ್ನೂ ರಿಕವರಿ ಮಾಡಲಾಗಿದೆ. ಈತನಿಗೆ ಕೃತ್ಯವೆಸಗಲು ಸಹಕಾರ ನೀಡಿದ್ದ ಮಧ್ಯ ಪ್ರದೇಶದ್ದೇ ಮೂಲದವರಾದ ಮನೀರ್ ಖಾನ್, ಅಭ್ಯಾಖಾನ್ ಮತ್ತು ಶೇರು ಪರಾರಿಯಾಗಿದ್ದಾರೆ. ಬಸ್‌ನಲ್ಲಿ ಪ್ರಯಾಣಿಸುವವರ ಬೆಲೆಬಾಳುವ ವಸ್ತು, ಚಿನ್ನಾಭರಣ, ಹಣ ಕಳ್ಳತನ ಮಾಡುವುದೇ ಈ ಗ್ಯಾಂಗ್ ಕಾಯಕವಾಗಿತ್ತು.

ಕಳ್ಳತನ ಮಾಡಲು ಅನುಕೂಲ ವಾಗುವ ನಿಟ್ಟಿನಲ್ಲಿ ಚಿಕ್ಕಬಳ್ಳಾಪುರದ ಜಿಲ್ಲೆಯ ಬೀಚಗಾನಹಳ್ಳಿ ಕ್ರಾಸ್ ಬಳಿ ಬಾಡಿಗೆಗೆ ಇವರು ರೂಮ್ ಕೂಡ ಪಡೆದಿದ್ದರು. ಕದ್ದ ಹಣವನ್ನು ಇಲ್ಲೇ ಇಟ್ಟು ಆರೋಪಿಗಳು ಮಧ್ಯಪ್ರದೇಶಕ್ಕೆ ತೆರಳಿದ್ದರು. ಹೀಗಾಗಿ ಹಣ ಸೇಫ್ ಆಗಿ ಇತ್ತು ಎನ್ನಲಾಗಿದೆ. ಇದೇ ತಿಂಗಳ 8ನೇ ತಾರೀಕು ಬೆಂಗಳೂರಿನಿಂದ ಹೈದರಾಬಾದ್‌ಗೆ ಹೊರಟಿದ್ದ KSRTC ಎಸಿ ಸ್ಲೀಪರ್ ಐಷಾರಾಮಿ ಬಸ್‌ನಲ್ಲಿ ವೆಂಕಟೇಶ್ವರ್ ರಾವ್ ಎಂಬವರು ಪ್ರಯಾಣಿಸುತ್ತಿದ್ದರು.

ಚಿಕ್ಕಬಳ್ಳಾಪುರ ತಾಲೂಕಿನ ಅರೂರು ಗ್ರಾಮದ ಬಳಿ ಇರುವ ಹೋಟಲ್ ವೊಂದರಲ್ಲಿ ಪ್ರಯಾಣಿಕರಿಗೆ ಊಟ ಮಾಡಲು ಚಾಲಕ ಬಸ್ ನಿಲ್ಲಿಸಿದ್ದ. ಈ ವೇಳೆ ವೆಂಕಟೇಶ್ವರ್ ರಾವ್ ತಮ್ಮ ಬಳಿ ಇದ್ದ ಹಣದ ಬ್ಯಾಗ್‌ನ ಬಸ್ ನಲ್ಲೇ ಬಿಟ್ಟು ಊಟಕ್ಕೆ ತೆರಳಿದ್ದರು.

ಆದರೆ ಹಿಂದಿರುಗಿ ಬಂದು ನೋಡುವಾಗ ಸೀಟ್‌ನಲ್ಲಿದ್ದ ಬ್ಯಾಗ್ ನಾಪತ್ತೆಯಾಗಿತ್ತು. ಕಾರಲ್ಲಿ ಬಂದ ವ್ಯಕ್ತಿ ಸೀದಾ ಬಸ್‌ಗೆ ನುಗ್ಗಿ ಬ್ಯಾಗ್ ತೆಗೆದುಕೊಂಡು ಹೋಗಿರುವ ಬಗ್ಗೆ ಸಹ ಪ್ರಯಾಣಿಕರು ಮಾಹಿತಿ ನೀಡಿದ್ದರು. ಘಟನೆ ಬಗ್ಗೆ ವೆಂಕಟೇಶ್ವರ್ ರಾವ್ ಅವರ ದೂರಿನ ಬೆನ್ನಲ್ಲೇ ಪೊಲೀಸರು ತನಿಖೆಗೆ ಇಳಿದಿದ್ದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ನದಿ ಜೋಡಣೆ ಯೋಜನೆ: ರಾಜ್ಯಕ್ಕೆ 40-45 ಟಿಎಂಸಿ ನೀರು ನಿಗದಿ ಮಾಡಬೇಕು - ಡಿ.ಕೆ. ಶಿವಕುಮಾರ್

**ನವದೆಹಲಿ:** "ನದಿ ಜೋಡಣೆ ಯೋಜನೆಯಲ್ಲಿ ನಮ್ಮ ರಾಜ್ಯಕ್ಕೆ ಕನಿಷ್ಠ 40-45 ಟಿಎಂಸಿ ನೀರನ್ನು ನೀಡಬೇಕು. ಗೋದಾವರಿ- ಕಾವೇರಿ ನದಿ ಜೋಡಣೆ ಯೋಜನೆಯಲ್ಲಿ ಹೆಚ್ಚುವರಿ 5 ಟಿಎಂಸಿ ನೀರನ್ನು ಭೀಮಾ ನದಿ ಪ್ರದೇಶಕ್ಕೆ ನೀಡಬೇಕು ಎಂದು ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು. ದೆಹಲಿಯ ಕರ್ನಾಟಕ ಭವನದಲ್ಲಿ ಮಾತನಾಡಿದ ಶಿವಕುಮಾರ್ ಅವರು, "ನದಿ ಜೋಡಣೆ ವಿಚಾರವಾಗಿ ಕೇಂದ್ರ ಜಲ ಶಕ್ತಿ ಸಚಿವರ ನೇತೃತ್ವದಲ್ಲಿ ರಾಷ್ಟ್ರೀಯ ಜಲ ಅಭಿವೃದ್ಧಿ ಸಂಸ್ಥೆ ಯನ್ನು ರಚಿಸಲಾಗಿದ್ದು, ಎಲ್ಲಾ ರಾಜ್ಯಗಳು ಅದರ ಸದಸ್ಯರಾಗಿರುತ್ತವೆ.

ಇದರ 24ನೇ ಸಭೆ ನಡೆದಿದ್ದು, ನಮ್ಮ ರಾಜ್ಯಕ್ಕೆ ಸಂಬಂಧಿಸಿದಂತೆ ಗೋದಾವರಿ ಹಾಗೂ ಕಾವೇರಿ, ಬೇಡ್ತಿ ಹಾಗೂ ವರದಾ ನದಿ ಜೋಡಣೆ ಬಗ್ಗೆ ಚರ್ಚೆ ನಡೆದಿದೆ" ಎಂದರು. "ಗೋದಾವರಿ ಹಾಗೂ ಕಾವೇರಿ ನದಿ ಜೋಡಣೆ ಯೋಜನೆಯ ಮೊದಲ ಹಂತದಲ್ಲಿ 148 ಟಿಎಂಸಿ ನೀರನ್ನು ತಿರುಗಿಸಲಾಗುತ್ತಿದ್ದು, ಇದರಲ್ಲಿ ಕರ್ನಾಟಕಕ್ಕೆ ನಿಗದಿ ಮಾಡಿರುವುದು ಕೇವಲ 15.90 ಟಿಎಂಸಿ ನೀರು ಮಾತ್ರ. ನೀರನ್ನು ಯಾವ ಕಡೆ ನೀಡುತ್ತೀರಿ ಹಾಗೂ ಅದನ್ನು ಹೇಗೆ ಉಪಯೋಗಿಸಬೇಕು ಎಂಬ ಬೇಡಿಕೆ ಸಭೆಯ ಮುಂದಿಟ್ಟಿದ್ದೇವೆ. ಬೇಡ್ತಿ ಹಾಗೂ ವರದಾ ನದಿ ಜೋಡಣೆ ನಮ್ಮ ರಾಜ್ಯದೊಳಗೆ ಮಾಡಲಿದ್ದು, 18.50 ಟಿಎಂಸಿ ನೀರನ್ನು ಬಳಸಿಕೊಳ್ಳಲು ಅವಕಾಶ ಇದೆ. ಈ ಎರಡೂ ಯೋಜನೆಗಳಿಂದ



ಕರ್ನಾಟಕಕ್ಕೆ ಒಟ್ಟು 34.40 ಟಿಎಂಸಿ ನೀರನ್ನು ನಿಗದಿ ಮಾಡಲಾಗಿದೆ. ಬೇಡ್ತಿ ಹಾಗೂ ವರದಾ ನದಿ ಜೋಡಣೆಗೆ ಡಿಪಿಆರ್ ತಯಾರಿಸಲು ನಾವು ಅನುಮತಿಯನ್ನು ನೀಡಿದ್ದೇವೆ. ಇದಕ್ಕೆ 10 ಸಾವಿರ ಕೋಟಿ ವೆಚ್ಚವಾಗಲಿದ್ದು, ಇದರಲ್ಲಿ 90% ಕೇಂದ್ರ ಸರ್ಕಾರ ಹಾಗೂ 10% ರಾಜ್ಯ ಸರ್ಕಾರ ಭರಿಸಲಿದೆ" ಎಂದು ಮಾಹಿತಿ ನೀಡಿದರು.

"ಸುಪ್ರೀಂ ಕೋರ್ಟ್ ಹಿನ್ನೆಲೆಯಲ್ಲಿ ಮೇಕೆದಾಟು ಯೋಜನೆಗೆ ಸಂಬಂಧಿಸಿದಂತೆ ಎಲ್ಲಾ ದಾಖಲೆಗಳನ್ನು ಎರಡು ತಿಂಗಳಲ್ಲಿ ಸಲ್ಲಿಕೆ ಮಾಡುತ್ತೇವೆ ಎಂದು ಕೇಂದ್ರ ಸಚಿವರ ಬಳಿ ತಿಳಿಸಿದ್ದೇನೆ. ಭದ್ರಾ ಮೇಲ್ದಂಡೆ ಯೋಜನೆಗೆ ಘೋಷಿಸಲಾಗಿರುವ ಹಣವನ್ನು ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದ್ದೇನೆ. ಇನ್ನು ಕೃಷ್ಣಾ ಮೇಲ್ದಂಡೆ ಯೋಜನೆ ಬಗ್ಗೆ ಕೇಂದ್ರ ಸರ್ಕಾರ ಅಧಿಸೂಚನೆ ಹೊರಡಿಸಬೇಕು. ಇದರ ಸಂಬಂಧ ಈಗಾಗಲೇ ಎರಡು ಬಾರಿ ಸಭೆ ಮುಂದೂಡಲ್ಪಟ್ಟಿದೆ. ಮಹದಾಯಿ ವಿಚಾರವಾಗಿ ಅಧಿಕಾರಿಗಳು ಸಭೆ ಮಾಡಿದ್ದಾರೆ. ಈ ಯೋಜನೆ ವಿಚಾರದಲ್ಲಿ ಅರಣ್ಯ ಇಲಾಖೆ ಮೇಲೆ ಒತ್ತಡ ಹಾಕುವಂತೆ ಕೇಳಿದ್ದೇವೆ" ಎಂದರು. "ಕೇಂದ್ರ ಸಚಿವರು ನನಗೆ ಮತ್ತೊಂದು ದಿನ ಭೇಟಿಗೆ ಸಮಯಾವಕಾಶ ನೀಡುತ್ತೇನೆ. ಜಲ ಜೀವನ್ ಮಿಷನ್ ಯೋಜನೆಯಿಂದ ಹಿಡಿದು ಕರ್ನಾಟಕಕ್ಕೆ ಸಂಬಂಧಿಸಿದ ಎಲ್ಲಾ ವಿಚಾರವಾಗಿ ಚರ್ಚೆ ಮಾಡಲು ತಿಳಿಸಿದ್ದಾರೆ" ಎಂದರು.

ಈ ಯೋಜನೆಗೆ 15.01.2025ರಂದು ಕೇಂದ್ರ ಸಚಿವಾಲಯದ ಒಪ್ಪಿಗೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಇದಕ್ಕೆ ಅನುಮತಿ ನೀಡಿದರೆ ನಾವು ಕೆಲಸ ಆರಂಭಿಸುತ್ತೇವೆ ಎಂದು ಸಚಿವರಿಗೆ ತಿಳಿಸಿದ್ದೇವೆ. ಇದರ ಪರಿಶೀಲನೆಗೆ ಸಿಸ್ತ ಎಂಬ ಸಂಸ್ಥೆಗೆ ವಹಿಸಲಾಗಿದೆ. ಅದರ ಶಿಫಾರಸ್ಸಿಗೆ ನಾವು ಬದ್ಧವಾಗಿದ್ದೇವೆ" ಎಂದು ತಿಳಿಸಿದರು. "ಇನ್ನು ಬೆಂಗಳೂರಿನಲ್ಲಿ ಪ್ರಾದೇಶಿಕ ಕ್ಷಿಪ್ರ ಸಂಚಾರ ವ್ಯವಸ್ಥೆಗೆ ಮನವಿ ಮಾಡಲಾಗಿದೆ. ಬಿಡದಿ- ಮೈಸೂರು, ಹಾರೋಹಳ್ಳಿ- ಕನಕಪುರ, ನೆಲಮಂಗಲ- ತುಮಕೂರು, ವಿಮಾನ ನಿಲ್ದಾಣ- ಚಿಕ್ಕಬಳ್ಳಾಪುರ, ಹೊಸಕೋಟೆ- ಕೋಲಾರ ಮಧ್ಯೆ ಈ ಸಂಚಾರ ವ್ಯವಸ್ಥೆ ನಿರ್ಮಿಸಲು ಡಿಪಿಆರ್ ತಯಾರಿಸಲು ಮನವಿ ಮಾಡಿದ್ದೇವೆ.

ಬೆಂಗಳೂರಿ ದಟ್ಟಣೆ ಹಾಗೂ ಒತ್ತಡ ಕಡಿಮೆ ಮಾಡಲು ಈ ಭಾಗದಲ್ಲಿ ಸ್ಯಾಟಲೈಟ್ ಟೌನ್ ನಿರ್ಮಿಸಬೇಕು ಎಂದು ಈ ಯೋಜನೆಗೆ ಮನವಿ ಮಾಡಿದ್ದು, ಇದನ್ನು ಪರಿಗಣಿಸುವುದಾಗಿ ಕೇಂದ್ರ ಸಚಿವರು ಭರವಸೆ ನೀಡಿದ್ದಾರೆ. ಬೆಂಗಳೂರಿಗೆ ಶಕ್ತಿ ತುಂಬದಿದ್ದರೆ ದೇಶಕ್ಕೆ ಅಪಮಾನ ಮಾಡಿದಂತಾಗುತ್ತದೆ. ಬೆಂಗಳೂರು ಜಾಗತಿಕ ನಗರವಾಗಿ ಬೆಳೆಯುತ್ತಿದೆ ಎಂದು ಮನದಟ್ಟು ಮಾಡಿದ್ದೇನೆ" ಎಂದರು.

## ಹನಿಮೂನ್ ಮಧ್ಯೆ ದುರಂತ: ನವವಿವಾಹಿತೆಯ ಆತ್ಮಹತ್ಯೆ ಯತ್ನ

**ಬೆಂಗಳೂರು:** ಮದುವೆಯಾದ ಕೇವಲ ಒಂದೂ ವರೆ ತಿಂಗಳಾಗಿರುವ ನವವಿವಾಹಿತೆ, ವರದಕ್ಷಿಣೆ ಕಿರುಕುಳಕ್ಕೆ ಬೇಸತ್ತು ಆತ್ಮಹತ್ಯೆಗೆ ಯತ್ನಿಸಿರುವ ಹೃದಯ ವಿದ್ರಾವಕ ಘಟನೆ ಬೆಂಗಳೂರಿನಲ್ಲಿ ಬೆಳಕಿಗೆ ಬಂದಿದೆ. 26 ವರ್ಷದ ಗಾನವಿ ಆತ್ಮಹತ್ಯೆಗೆ ಯತ್ನಿಸಿದ್ದು, ಇದೀಗ ಖಾಸಗಿ ಆಸ್ಪತ್ರೆಯ ಐಸಿಯುನಲ್ಲಿದ್ದು, ಸಾವು- ಬದುಕಿನ ನಡುವೆ ಹೋರಾಡುತ್ತಿದ್ದಾರೆ.

ಗಾನವಿ ಹಾಗೂ ಸೂರಜ್ ಅವರ ವಿವಾಹವು ಕಳೆದ ಅಕ್ಟೋಬರ್ 29ರಂದು ನೆರವೇರಿತ್ತು. ಬಳಿಕ ಗಂಡನ ಮನೆಯವರಿಂದ ವರದಕ್ಷಿಣೆ ಹಾಗೂ ಚಿನ್ನಾಭರಣ ವಿಚಾರವಾಗಿ ಮಾನಸಿಕ ಕಿರುಕುಳ ಆರಂಭವಾಗಿದೆ ಎಂಬ ಗಂಭೀರ ಆರೋಪವನ್ನು ಗಾನವಿ ಕುಟುಂಬದವರು ಮಾಡಿದ್ದಾರೆ. ಗಂಡನ ಮನೆಯವರ ಬೇಡಿಕೆಯಂತೆ ಅದ್ದೂರಿಯಾಗಿ ರಿಸೆಪ್ಷನ್ ಆಯೋಜಿಸಲಾಗಿತ್ತು. ನವೆಂಬರ್ 23ರಂದು ಪ್ಯಾಲೇಸ್ ಗ್ರೌಂಡ್ಸ್‌ನಲ್ಲಿ ನಡೆದ ಈ ರಿಸೆಪ್ಷನ್‌ಗೆ ಗಾನವಿ ಕುಟುಂಬವು ಸುಮಾರು 40 ಲಕ್ಷ ರೂಪಾಯಿ ಖರ್ಚು ಮಾಡಿದ್ದಾರೆ. ಈ ಕಾರ್ಯಕ್ರಮದ ಬಳಿಕ ದಂಪತಿ ಹತ್ತು ದಿನಗಳ ಶ್ರೀಲಂಕಾ ಹನಿಮೂನ್‌ಗೆ ತೆರಳಿದ್ದರು.

ಆದರೆ,ನಿಗದಿತ ಅವಧಿಗೂ ಐದು ದಿನ ಮೊದಲೇ ಭಾನುವಾರ ಪತಿ ಸೂರಜ್, ಗಾನವಿ ಯನ್ನು ಶ್ರೀಲಂಕಾ ದಿಂದ ವಾಪಸ್ ಬಂದಿದ್ದಾರೆ. ಹನಿಮೂನ್ ಪ್ರವಾಸದ ಮಧ್ಯೆ ಏನಾಯಿತು? ದಂಪತಿಯ



ನಡುವೆ ಯಾವ ರೀತಿಯ ಸಮಸ್ಯೆ ಉಂಟಾಯಿತು? ಎಂಬ ಪ್ರಶ್ನೆಗಳು ಇದೀಗ ಕುಟುಂಬ ದವರಲ್ಲಿ ಮೂಡಿದೆ.

ಶ್ರೀಲಂಕಾ ಪ್ರವಾಸದ ವೇಳೆ ದಂಪತಿಯ ನಡುವೆ ತೀವ್ರ ಮನಸ್ತಾಪ ಉಂಟಾಗಿದೆ. ಈ ಬಗ್ಗೆ ಪ್ರಶ್ನೆ ಮಾಡಿದಾಗ, "ನಿಮ್ಮ ಮಗಳನ್ನು ಕರೆದುಕೊಂಡು ಹೋಗಿ" ಎಂದು ಸೂರಜ್ ಕುಟುಂಬದವರು ಅವಾಜ್ ಹಾಕಿದ್ದಾರೆ ಎಂಬ ಆರೋಪವೂ ಕೇಳಿ ಬಂದಿದೆ. ಇದಾದ ನಂತರ ಗಾನವಿಯ ಮೇಲೆ ವರದಕ್ಷಿಣೆ ಮತ್ತು ಒಡವೆಗಳಿಗಾಗಿ ನಿರಂತರ ಒತ್ತಡ ಹಾಗೂ ಕಿರುಕುಳ ನೀಡಲಾಗಿದೆ ಎನ್ನಲಾಗಿದೆ.

ಈ ಎಲ್ಲಾ ಮಾನಸಿಕ ಹಿಂಸೆಯಿಂದ ಮನನೊಂದ ಗಾನವಿ, ನಿನ್ನೆ ಮಧ್ಯಾಹ್ನ ತನ್ನ ನಿವಾಸದಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಯತ್ನಿಸಿದ್ದಾರೆ. ತಕ್ಷಣ ಅವರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದ್ದು, ವೈದ್ಯರು ಆರಂಭದಲ್ಲಿ 'ಬ್ರೈಡ್ ಡೆಡ್' ಸ್ಥಿತಿಯಲ್ಲಿ ದ್ದಾರೆ ಎಂದು ಕುಟುಂಬಕ್ಕೆ ಮಾಹಿತಿ ನೀಡಿದ್ದಾರೆ. ಆದರೆ ಇದೀಗ ಗಾನವಿ ವೆಂಟಿಲೇಟರ್‌ನಲ್ಲಿ ಚಿಕಿತ್ಸೆ ಪಡೆಯು ತ್ತಿದ್ದಾರೆ.

ಘಟನೆಗೆ ಸಂಬಂಧಿಸಿದಂತೆ ಗಾನವಿ ಕುಟುಂಬ ರಾಮಮೂರ್ತಿ ನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ದೂರಿನ ಅನ್ವಯ, ಪತಿ ಸೂರಜ್, ಅತ್ತೆ ಜಯಂತಿ ಹಾಗೂ ಪತಿಯ ಅಣ್ಣ ಸಂಜಯ್ ವಿರುದ್ಧ ವರದಕ್ಷಿಣೆ ಕಿರುಕುಳ ಮತ್ತು ಆತ್ಮಹತ್ಯೆಗೆ ಪ್ರಚೋದನೆ ಆರೋಪದಡಿ ಪ್ರಕರಣ ದಾಖಲಾಗಿದೆ.

## ಸ್ಫೋಟದ ಭೀತಿ: ಫ್ಲೈಓವರ್‌ನಲ್ಲಿ ಬಾಂಬ್ ದಾಳಿಗೆ ಯುವಕ ಬಲಿ

**ಬಾಂಗ್ಲಾದೇಶ**: ನೆರೆರಾಷ್ಟ್ರದಲ್ಲಿ ಹಿಂಸಾಚಾರ ಮುಂದುವರಿಯುತ್ತಿದ್ದು, ಇದೀಗ ರಾಜಧಾನಿ ಢಾಕಾದಲ್ಲಿ ಭೀಕರ ಬಾಂಬ್ ಸ್ಫೋಟ ಸಂಭವಿಸಿದೆ. ಢಾಕಾದ ಮೊಘ್‌ಬಜಾರ್ ಫ್ಲೈ ಓವರ್ ಬಳಿ ನಡೆದ ಈ ಬಾಂಬ್ ಎಸೆತ ಘಟನೆಯಲ್ಲಿ ಓರ್ವ ಯುವಕ ಮೃತಪಟ್ಟು, ಹಲವರು ತೀವ್ರವಾಗಿ ಗಾಯಗೊಂಡಿದ್ದಾರೆ. ಕ್ರಿಸ್‌ಮಸ್ ಹಬ್ಬದ ಇರುವಾಗಲೇ ಈ ಘಟನೆ ನಡೆದಿರುವುದು ಅಲ್ಲಿನ ಅಲ್ಪಸಂಖ್ಯಾತರಲ್ಲಿ ಹಾಗೂ ಸಾರ್ವಜನಿಕರಲ್ಲಿ ಭಾರೀ ಭೀತಿಯನ್ನು ಮೂಡಿಸಿದೆ.

ಸುಮಾರಿಗೆ ಢಾಕಾದ ಮೊಘ್‌ಬಜಾರ್ ಫ್ಲೈಓವರ್ ಮೇಲೆ ಈ ದಾಳಿ ನಡೆದಿದೆ. ಪ್ರತ್ಯಕ್ಷದರ್ಶಿಗಳು ತಿಳಿಸಿದಂತೆ, ಫ್ಲೈಓವರ್ ಮೇಲಿಂದ ಅಪರಿಚಿತ ದುಷ್ಕರ್ಮಿಗಳು ಕೆಳಕ್ಕೆ 'ಕಚ್ಚಾ ಬಾಂಬ್' ಅಥವಾ ಕಾಕ್‌ಟೈಲ್ ಬಾಂಬ್‌ಗಳನ್ನು ಎಸೆದಿದ್ದಾರೆ. ಈ ಬಾಂಬ್‌ಗಳು ಮುಕ್ತಿಜೋಧ ಸಂಸದ್ ಮುಂಭಾಗದಲ್ಲಿ ಭೀಕರವಾಗಿ ಸ್ಫೋಟಗೊಂಡಿವೆ. ಸ್ಫೋಟದ ತೀವ್ರತೆಗೆ ಇಡೀ ಪ್ರದೇಶವೇ ಕಂಪಿಸಿದ್ದು, ಜನರು



ದಿಕ್ಕಾಪಾಲಾಗಿ ಓಡಿದ್ದಾರೆ. ಈ ದುರ್ಘಟನೆಯಲ್ಲಿ 24 ವರ್ಷದ ಸಿಯಾಮ್ ಎಂಬ ಯುವಕ ಮೃತಪಟ್ಟಿದ್ದಾನೆ. ಈತ ಫ್ಲೈಓವರ್ ಕೆಳಗಿರುವ 'ಜಾಹಿದ್ ಕಾರ್ ಡೆಕೋರೇಷನ್' ಎಂಬ ಅಂಗಡಿಯಲ್ಲಿ ಕೆಲಸ ಮಾಡುತ್ತಿದ್ದನು.

ಕೆಲಸದ ನಡುವೆ ಚಹಾ ಕುಡಿಯಲು ಅಂಗಡಿಯಿಂದ ಹೊರಬಂದಿದ್ದ ಸಮಯದಲ್ಲಿ ಫ್ಲೈಓವರ್ ಮೇಲಿಂದ ಬಿದ್ದ ಬಾಂಬ್ ಇವನ ಬಳಿಯೇ ಸ್ಫೋಟಗೊಂಡಿದೆ. ತೀವ್ರವಾಗಿ ಗಾಯಗೊಂಡಿದ್ದ ಸಿಯಾಮ್‌ನನ್ನು ಕೂಡಲೇ ಆಸ್ಪತ್ರೆಗೆ ದಾಖಲಿಸಲಾಯಿತಾದರೂ, ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾನೆ ಎಂದು ತಿಳಿದುಬಂದಿದೆ. ಸ್ಫೋಟ ಸಂಭವಿಸಿದ ಕೂಡಲೇ ಸ್ಥಳಕ್ಕೆ ಬಂದ ಪೊಲೀಸರು ಮತ್ತು ಭದ್ರತಾ ಪಡೆಗಳು ಪರಿಶೀಲನೆ ನಡೆಸಿದ್ದಾರೆ. ದಾಳಿಕೋರರು ಸ್ಫೋಟದ ಬೆನ್ನಲ್ಲೇ ಪರಾರಿಯಾಗಿದ್ದು, ಅವರ ಪತ್ತೆಗಾಗಿ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಲಾಗುತ್ತಿದೆ.

ಗಾಯಗೊಂಡವರನ್ನು ಢಾಕಾ ವೈದ್ಯಕೀಯ ಕಾಲೇಜು ಆಸ್ಪತ್ರೆಗೆ ದಾಖಲಿಸಲಾಗಿದೆ. ಬಾಂಗ್ಲಾದೇಶದಲ್ಲಿ ಕಳೆದ ಕೆಲವು ದಿನಗಳಿಂದ ಕೋಮು ಜಗಳ ಹೆಚ್ಚಾಗಿದೆ. ಇತ್ತೀಚೆಗಷ್ಟೇ ಧರ್ಮನಿಂದನೆ ಆರೋಪದ ಮೇಲೆ ಹಿಂದೂ ವ್ಯಕ್ತಿಯೊಬ್ಬನನ್ನು ಗುಂಪು ಹತ್ಯೆ ಮಾಡಲಾಗಿತ್ತು.

ಪ್ರಸ್ತುತ ಈ ಘಟನೆಯ ಹಿನ್ನೆಲೆ ಅಲ್ಪಸಂಖ್ಯಾತ ಸಮುದಾಯಗಳು ಹಾಗೂ ಧಾರ್ಮಿಕ ಕೇಂದ್ರಗಳಿಗೆ ಭದ್ರತೆ ಹೆಚ್ಚಿಸುವಂತೆ ಸಾರ್ವಜನಿಕರು ಮನವಿ ಮಾಡಿದ್ದಾರೆ. ಢಾಕಾದಲ್ಲಿ ಸದ್ಯ ಪರಿಸ್ಥಿತಿ ಉದ್ವಿಗ್ನವಾಗಿದ್ದು, ಸೇನೆ ಮತ್ತು ಪೊಲೀಸರು ಹದ್ದಿನ ಕಣ್ಣಿಟ್ಟಿದ್ದಾರೆ. ಸದ್ಯ ಪೊಲೀಸರು ಆರೋಪಿಗಳನ್ನ ಹುಡುಕುತ್ತಿದ್ದಾರೆ.

## ಮದುವೆಗೂ ಮುನ್ನ ತಾಯಿ-ಮಗಳು ಬೆಂಕಿಗೆ ಆಹುತಿ

**ಚಿತ್ರದುರ್ಗ**: ಹಿರಿಯೂರು ತಾಲೂಕಿನ ಗೊರ್ಲತ್ತು ಕ್ರಾಸ್ ಬಳಿ ಖಾಸಗಿ ಸ್ಲೀಪರ್ ಬಸ್ ಮತ್ತು ಲಾರಿ ನಡುವೆ ನಡೆದ ಭೀಕರ ಅಪಘಾತದಲ್ಲಿ ಒಟ್ಟು 6 ಜನ ಸಜೀವ





ದಹನವಾಗಿದ್ದಾರೆ. ಲಾರಿ ಚಾಲಕ ಸೇರಿ ಬಸ್‌ನಲ್ಲಿದ್ದ 5 ಮಂದಿ ಪ್ರಾಣ ಕಳೆದುಕೊಂಡಿದ್ದು, ಹಲವರ ಸ್ಥಿತಿ ಗಂಭೀರವಾಗಿದೆ. ಬಸ್‌ನಲ್ಲಿ ಚಾಲಕ ಮತ್ತು ನಿರ್ವಾಹಕ ಸೇರಿ ಒಟ್ಟು 33 ಮಂದಿ ಪ್ರಯಾಣಿಸುತ್ತಿದ್ದರು ಎನ್ನಲಾಗಿದೆ. ಚಿತ್ರದುರ್ಗ, ಶಿರಾ, ಹಿರಿಯೂರು ಸೇರಿ ವಿವಿಧ ಆಸ್ಪತ್ರೆಗಳಲ್ಲಿ ಗಾಯಾಳುಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ. ಇನ್ನು ಅಪಘಾತದಲ್ಲಿ ಬದುಕುಳಿದ ಒಬ್ಬೊಬ್ಬ ಪ್ರಯಾಣಿಕರ ಕತೆಯೂ ರೋಚಕವಾಗಿದೆ. ಒಂದೇ ಐಟಿ ಕಂಪನಿಯ 6 ಮಂದಿ ಸಹೋದ್ಯೋಗಿಗಳು ಬೆಂಕಿಯ ಕೆನ್ನಾಲೆಯ ನಡುವೆ ಸಿಲುಕಿ ಒದ್ದಾಡಿದ್ದಾರೆ. ಕವಿತಾರ ಮದುವೆ ನಿಗದಿಯಾಗಿರುವ ಹಿನ್ನೆಲೆ ಬ್ಯಾಚುಲರ್ ಪಾರ್ಟಿಗೆಂದು ಇವರು ಗೋಕರ್ಣಕ್ಕೆ ತೆರಳುತ್ತಿದ್ದರು. ಅಲ್ಲಿನ ಖಾಸಗಿ ರೆಸಾರ್ಟ್‌ನಲ್ಲಿ ಪಾರ್ಟಿಯೂ ನಿಗದಿಯಾಗಿತ್ತು.

ಕ್ರಿಸ್ಮಸ್ ರಜೆ ಹಿನ್ನೆಲೆ ತಂಡವೇ ಗೋಕರ್ಣಕ್ಕೆ ಹೊರಟಿತ್ತು. ಆ ಪೈಕಿ ಬಿಂದು ಮತ್ತು ಆಕೆಯ 5 ವರ್ಷದ ಮಗುಗ್ರೇಯ ಅಪಘಾತದಲ್ಲಿ ಸಾವನ್ನಪ್ಪಿದ್ದಾರೆ. ಗಾಯಾಳುಗಳಾದ ಶಶಾಂಕ್ ಮತ್ತು ಸಂಧ್ಯಾ ಅವರಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗ್ತಿದೆ. ಹಾಸನ ಜಿಲ್ಲೆ ಚನ್ನರಾಯಪಟ್ಟಣ ಮೂಲದ ಮಾನಸ ಐಡಿಯಲ್ಲಿ ನಾಲ್ಕು ಜನರಿಗೆ ಟಿಕೆಟ್ ಬುಕ್ ಆಗಿತ್ತು. ಬೆಂಗಳೂರು ಐಟಿ ಕಂಪನಿಯಲ್ಲಿ ಕೆಲಸ ಮಾಡ್ತಿದ್ದ ಮಾನಸ ಪಿಜಿಯಲ್ಲಿ ವಾಸವಿದ್ದರು. ತಮ್ಮ ಜೊತೆಗೆ ಇದ್ದ ನವ್ಯಾ, ಮಿಲನ ಸೇರಿ ಅಭಿಷೇಕ್ ಎಂಬವರ ಜೊತೆ ಗೋಕರ್ಣ ಪ್ರವಾಸಕ್ಕೆ ಹೊರಟಿದ್ದರು. ಮಾನಸಾಗೆ ಮದುವೆಯೂ ನಿಗದಿಯಾಗಿದ್ದು, ಅದಕ್ಕಾಗಿ ಆಭರಣವನ್ನೂ ಕುಟುಂಬ ಖರೀದಿಸಿತ್ತು. ಆದ್ರೆ ವಿಧಿಯಾಟಕ್ಕೆ ಹಸೆಮಣೆ ಏರುವ ಮುನ್ನವೇ ಅವರು ಮಸಣ ಸೇರಿದ್ದಾರೆ. ಬಸ್ ಹೊತ್ತಿ ಉರಿಯುತ್ತಿದ್ದ ವೇಳೆ ಏನು ಮಾಡಬೇಕೆಂದು ತೋಚದೆ ಕೆಲವರು ಬಸ್‌ನಿಂದ ಹೊರಗಡೆ ಹಾರಿದ ಪರಿಣಾಮ ಅವರ ಪ್ರಾಣ ಉಳಿದಿದೆ. ಇಬ್ಬರು ಬಸ್‌ನಿಂದ ಜಿಗಿಯುವ ದೃಶ್ಯ ಮೊಬೈಲ್ ಕ್ಯಾಮರಾದಲ್ಲಿ ಸೆರೆಯಾಗಿದೆ. ಬುಕಿಂಗ್ ಮಾಡಿದ ಪ್ರಯಾಣಿಕರು ಮಾತ್ರವಲ್ಲದೆ ಮಾರ್ಗ ಮಧ್ಯೆ ಬಸ್ ಹತ್ತಿದ ಇಬ್ಬರು ಕೂಡ ಬಸ್‌ನಲ್ಲಿ ಇದ್ದರು ಎಂಬುದು ಗೊತ್ತಾಗಿದೆ.

## ಗೆಳೆಯನಿಗಾಗಿ ಡ್ರಗ್ಸ್ ಮಾರಾಟ ಮಹಿಳಾ ಟೆಕ್ಕಿ ಸೇರಿದಂತೆ ನಾಲ್ವರು ಅರೆಸ್ಟ್

**ಹೈದರಾಬಾದ್**: ಮಾದಕವಸ್ತು ಜಾಲಕ್ಕೆ ಸಂಬಂಧಿಸಿದಂತೆ 21 ವರ್ಷದ ಮಹಿಳಾ ಸಾಫ್ಟ್‌ವೇರ್ ಎಂಜಿನಿಯರ್, ಆಕೆಯ ಗೆಳೆಯ ಮತ್ತು ಇಬ್ಬರನ್ನು ಹೈದರಾಬಾದ್ ಪೊಲೀಸರು ಬಂಧಿಸಿದ್ದಾರೆ. ಸುಶ್ಮಿತಾ ದೇವಿ ಅಲಿಯಾಸ್ ಲಿಲ್ಲಿ(21), ಉಮ್ಮಿಡಿ ಇಮ್ಯಾನುಯೆಲ್(25), ಜಿ ಸಾಯಿ ಕುಮಾರ್(28)ಮತ್ತು ತಾರಕ ಲಕ್ಷ್ಮಿಕಾಂತ್ ಅಯ್ಯಪ್ಪ(24) ಬಂಧಿತ ಆರೋಪಿಗಳು. ದಾಳಿಯ ಸಮಯದಲ್ಲಿ ಗಾಂಜಾ, ಎಲ್‌ಎಸ್‌ಡಿ ಮತ್ತು ಎಕ್ಸ್‌ಟಸಿ ಮಾತ್ರೆಗಳು ಸೇರಿದಂತೆ ಭಾರೀ ಪ್ರಮಾಣದ ಮಾದಕವಸ್ತುಗಳನ್ನು ವಶಪಡಿಸಿ ಕೊಳ್ಳಲಾಗಿದೆ. ಈವೆಂಟ್ ಮ್ಯಾನೇಜರ್ ಆಗಿರುವ ಇಮ್ಯಾನುಯೆಲ್ ಈ ಡ್ರಗ್ಸ್ ಜಾಲದ ಪ್ರಮುಖ ಆರೋಪಿಯಾಗಿದ್ದು ಈತನನ್ನು ಸುಶ್ಮಿತಾ ದೇವಿ ಪ್ರೀತಿಸುತ್ತಿದ್ದಳು. ವಶಪಡಿಸಿಕೊಂಡ ಮಾದಕ ವಸ್ತುಗಳಲ್ಲಿ 22 ಗ್ರಾಂ ಹೈಡ್ರೋಪೋನಿಕ್ ಗಾಂಜಾ, 5 ಗ್ರಾಂ ಎಂಡಿಎಂಎ, ಆರು ಎಲ್‌ಎಸ್‌ಡಿ ಬ್ಲಾಟ್‌ಗಳು ಮತ್ತು ಎಕ್ಸ್‌ಟಸಿ ಮಾತ್ರೆಗಳು ಸೇರಿವೆ. ಪೊಲೀಸರು ಅವರಿಂದ 50 ಸಾವಿರ ರೂ. ನಗದು ಮತ್ತು ನಾಲ್ಕು ಮೊಬೈಲ್ ಫೋನ್‌ಗಳನ್ನು ವಶಪಡಿಸಿಕೊಂಡಿದ್ದಾರೆ. ಟಾರ್ ಬ್ರೌಸರ್‌ನಂತಹ ಬಳಸಿಕೊಂಡು ಇಮ್ಯಾನುಯೆಲ್ ಡಾರ್ಕ್ ವೆಬ್ ಸೇರಿದಂತೆ ಪೂರೈಕೆದಾರರಿಂದ ಮಾದಕ ವಸ್ತುಗಳನ್ನು ಪಡೆಯುತ್ತಿದ್ದ. ಬೈನಾನ್ಸ್ ಮತ್ತು ಟ್ರಸ್ಟ್ ವಾಲೆಟ್‌ನಂತಹ ಕ್ರಿಪ್ಟೋಕರೆನ್ಸಿ ವ್ಯಾಲೆಟ್‌ಗಳ ಮೂಲಕ ಡ್ರಗ್ಸ್ ಮಾರಾಟ ಮಾಡುತ್ತಿದ್ದ.

## ನಾಯಿ ಕಚ್ಚಿದ ಕೆಲವೇ ಗಂಟೆಗಳಲ್ಲಿ ಬೊಗಳುತ್ತಾ ಕಚ್ಚಲು ಯತ್ನಿಸಿದ ವ್ಯಕ್ತಿ

**ಉತ್ತರ ಪ್ರದೇಶ:** ಅಲಿಗಢ ಜಿಲ್ಲೆಯಲ್ಲಿ ಬೆಚ್ಚಿಬೀಳಿಸುವ ಘಟನೆಯೊಂದು ನಡೆದಿದೆ. ಬೀದಿ ನಾಯಿ ಕಚ್ಚಿದ ಕೇವಲ ಕೆಲವೇ ಗಂಟೆಗಳಲ್ಲಿ 23 ವರ್ಷದ ಯುವಕನಲ್ಲಿ ರೇಬೀಸ್‌ನ ಭೀಕರ ಲಕ್ಷಣಗಳು ಕಾಣಿಸಿಕೊಂಡಿದ್ದು, ಆತ ನಾಯಿಯಂತೆ ವರ್ತಿಸಲು ಆರಂಭಿಸಿದ್ದಾನೆ. ಈ ಘಟನೆ ಗ್ರಾಮಸ್ಥರಲ್ಲಿ ಆತಂಕ ಉಂಟು ಮಾಡಿದೆ. ಈ ಘಟನೆ ಅಲಿಗಢ ಜಿಲ್ಲೆಯ ಖೈರ್ ತಹಸಿಲ್ ವ್ಯಾಪ್ತಿಯ ಉತ್ವಾರ್ ಗ್ರಾಮದಲ್ಲಿ ನಡೆದಿದೆ.

ರಾಮ್‌ಕುಮಾರ್ ಅಲಿಯಾಸ್ ರಾಮು (23) ಎಂಬ ಯುವಕ ಡಿಸೆಂಬರ್ 20ರಂದು ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದ ವೇಳೆ ಬೀದಿ ನಾಯಿಯೊಂದು ಆತನ ಕಾಲಿಗೆ ಕಚ್ಚಿದೆ. ಗಾಯ ಹೆಚ್ಚು ಗಂಭೀರವಾಗಿಲ್ಲ ಎಂದು ಭಾವಿಸಿದ ಕುಟುಂಬಸ್ಥರು ಆಸ್ಪತ್ರೆಗೆ ಕರೆದೊಯ್ಯದೆ ಮನೆಯಲ್ಲೇ ಪ್ರಾಥಮಿಕ ಚಿಕಿತ್ಸೆ ನೀಡಿದ್ದಾರೆ. ಮರುಸಿನ ಆತನ ಸ್ಥಿತಿ ಹದಗೆಡಲು ಶುರುವಾಗಿದೆ. ನಾಯಿ ಕಚ್ಚಿದ ಮರುದಿನದಿಂದಲೇ ರಾಮು ಆರೋಗ್ಯದಲ್ಲಿ ತೀವ್ರ ಬದಲಾವಣೆ ಕಾಣಿಸತೊಡಗಿದೆ. ಮೊದಲಿಗೆ ಜ್ವರ, ಅಸ್ವಸ್ಥತೆ ಕಾಣಿಸಿಕೊಂಡಿದ್ದು, ಬಳಿಕ ಆತನ ವರ್ತನೆ ಸಂಪೂರ್ಣವಾಗಿ ಬದಲಾಯಿತು.

ಏಕಾಏಕಿ ನಾಯಿ ಯಂತೆ ಶಬ್ದ ಮಾಡುವುದು, ಕೂಗುವುದು, ಎದುರಿಗೆ ಬಂದವರ ಮೇಲೆ ಎರಗಲು ಪ್ರಯತ್ನಿಸುವುದು, ಕಚ್ಚಲು ಯತ್ನಿಸುವಂತಹ ಭೀಕರ ಲಕ್ಷಣಗಳು ಕಾಣಿಸಿಕೊಂಡಿವೆ. ಇದರಿಂದ ಗಾಬರಿಗೊಂಡ ಕುಟುಂಬಸ್ಥರು ಹಾಗೂ ಗ್ರಾಮಸ್ಥರು ಆತನನ್ನು ಹಿಡಿಯಲು ಹರಸಾಹಸ ಪಟ್ಟಿದ್ದಾರೆ. ರಾಮು ಸ್ಥಿತಿಯನ್ನು ಕಂಡ ಗ್ರಾಮಸ್ಥರು, ಕೊನೆಗೆ ಆತನನ್ನು ಮಂಚಕ್ಕೆ ಹಗ್ಗದಿಂದ ಕಟ್ಟಿ ಹಾಕಿದ್ದಾರೆ.

ಈ ಮನಕಲಕುವ ದೃಶ್ಯದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ನೋಡಿ ದವರಲ್ಲಿ ಬೆಚ್ಚಿಬೀಳಿಸುವಂತಾಗಿದೆ. ಆತನ ಸ್ಥಿತಿ ಗಂಭೀರವಾಗುತ್ತಿದ್ದಂತೆ ಕುಟುಂಬಸ್ಥರು ತಕ್ಷಣ ರಾಮುವನ್ನು ಖೈರ್ ಸಮುದಾಯ ಆರೋಗ್ಯ ಕೇಂದ್ರಕ್ಕೆ ದಾಖಲಿಸಿದ್ದಾರೆ. ಅಲ್ಲಿ ವೈದ್ಯರು ಯುವಕನ ಸ್ಥಿತಿಯನ್ನು ಪರಿಶೀಲಿಸಿ, ಇದು ರೇಬೀಸ್‌ನ ಲಕ್ಷಣಗಳು ಎಂದು ಶಂಕಿಸಿದ್ದಾರೆ.

ತಕ್ಷಣ ಹೆಚ್ಚಿನ ಚಿಕಿತ್ಸೆ ಅಗತ್ಯವಿರುವುದರಿಂದ ಆತನನ್ನು ದೆಹಲಿಯ ಏಮ್ಸ್ ಆಸ್ಪತ್ರೆಗೆ ರವಾನಿಸಲು ಸೂಚಿಸಿದ್ದಾರೆ. ರಾಮು ದೆಹಲಿ ಏಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಆತನ ಸ್ಥಿತಿ ಅತ್ಯಂತ ಗಂಭೀರವಾಗಿದೆ ಎಂದು ವೈದ್ಯರು ತಿಳಿಸಿದ್ದಾರೆ. ರೇಬೀಸ್ ಲಕ್ಷಣಗಳು ತೀವ್ರವಾಗಿರುವುದರಿಂದ ಸಾವು-ಬದುಕಿನ ನಡುವೆ ಹೋರಾಟ ನಡೆಸುತ್ತಿದ್ದಾನೆ ಎನ್ನಲಾಗಿದೆ. ರೇಬೀಸ್ ರೋಗವು ಒಮ್ಮೆ ತೀವ್ರ ಲಕ್ಷಣಗಳು ಕಾಣಿಸಿಕೊಂಡರೆ ಚಿಕಿತ್ಸೆ ಅತ್ಯಂತ ಕಷ್ಟಕರ ಎಂದು ವೈದ್ಯರು ತಿಳಿಸಿದ್ದಾರೆ.

## ಅಟಲ್ ಜೀ ಉದಾತ್ತ ಆದರ್ಶ, ಚಿಂತನೆಗಳನ್ನು ಸಮಾಜದಲ್ಲಿ ಹಿಂದಿಗೂ ಮಾದರಿಯಾಗಿವೆ: ರಮೇಶ್



ದೇವನಹಳ್ಳಿ: ಭಾರತವನ್ನು 21ನೇ ಶತಮಾನದ ಮುನ್ನಲೆಗೆ ತಂದು ನಿಲ್ಲಿಸಿದವರು ಅಜಾತ ಶತ್ರು ಮಾಜಿ ಪ್ರಧಾನಿ, ಭಾರತರತ್ನ ದಿ.ಅಟಲ್ ಅವರ ಜೀವನ, ಸಾಧನೆಗಳನ್ನು ಸಾರುವ ನಿಟ್ಟಿನಲ್ಲಿ ವಾಜಪೇಯಿ ಜನ್ಮ ಶತಮಾನೋತ್ಸವ ವರ್ಷಾಚರಣೆ ಹಮ್ಮಿಕೊಳ್ಳ ಲಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಮುಖಂಡ ರಮೇಶ್ ಅವರು ತಿಳಿಸಿದರು.

ಪಟ್ಟಣದ ಶಿಲ್ಪಕಲಾ ಶಾಲೆ ಬಳಿ ದೇವನಹಳ್ಳಿ ತಾಲೂಕು ವಾಜಪೇಯಿ ಅಭಿಮಾನಿಗಳಿಂದ ಏರ್ಪಡಿಸಿದ್ದ ಕಾರ್ಯ ಕ್ರಮದಲ್ಲಿ ಮಾತನಾಡಿ, ಅಜಾತ ಶತ್ರು ಮಾಜಿ ಪ್ರಧಾನಿಗಳು, ಭಾರತರತ್ನ ಪುರಸ್ಕೃತ ದಿ.ಅಟಲ್ ಬಿಹಾರಿ ವಾಜಪೇಯಿ ರವರ 101ನೇ ಜನ್ಮದಿನಾಚರಣೆ ಕಾರ್ಯಕ್ರಮ ದೇಶದ್ಯಂತ ಆಚರಿಸಲಾಗುತ್ತಿದೆ. ದೇಶದ ಏಕತೆ ಹಾಗೂ ಐಕ್ಯತೆ ವಿಚಾರದಲ್ಲಿ ಅಟಲ್ ಬಿಹಾರಿ ಅಪಾರವೆಂದರು.

ಈ ಸಂದರ್ಭದಲ್ಲಿ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಕೃಷ್ಣಪ್ಪ, ತಾಲ್ಲೂಕು ಸಮ್ಮೇಳನ ಮಾಜಿ ಅಧ್ಯಕ್ಷ ಶರ ಣಯ್ಯ ಹಿರೇಮಠ್, ಹೋಬಳಿ ಅಧ್ಯಕ್ಷ ವಿಜಯಪುರ ಕನಕರಾಜು, ಕನ್ನಮಂಗಲ ಶಿವ ಶಂಕರ, ಬಿಜೆಪಿ ಮುಖಂಡರಾದ ಗುರುಸ್ವಾಮಿ, ರಂಗಸ್ವಾಮಿ, ವಿಜಯಕುಮಾರ್, ರಮೇಶ್, ಬೂದಿಗೆರೆ ಪ್ರಭಾಕರ್, ನಾರಾಯಣಸ್ವಾಮಿ, ವಿಜಯ ಕುಮಾರ್, ಮಧು, ವಾಸು, ಧಾರ್ಮಿಕ ಯುವ ಮುಖಂಡ ಮಂಜುನಾಥ್ ಹಾಜರಿದ್ದರು.

## 4500 ವರ್ಷ ಪ್ರಾಚೀನ ಸೂರ್ಯ ದೇವಾಲಯ ಪತ್ತೆ



**ನವದೆಹಲಿ:** ಈಜಿಪ್ಟ್ ದೇಶದ ರಾಜಧಾನಿ ಕೈರೋ ಬಳಿ ನಡೆದ ಪುರಾತತ್ತ್ವ ಶಾಸ್ತ್ರದ ಉತ್ಖನನ ನಡೆದಿದ್ದು, ಇದು ಪ್ರಪಂಚ ದಾದ್ಯಂತದ ಇತಿಹಾಸಕಾರರು ಮತ್ತು ವಿಜ್ಞಾನಿಗಳ ಗಮನ ಸೆಳೆದಿದೆ. ಪುರಾತತ್ತ್ವಜ್ಞರು ಸೂರ್ಯ ದೇವರಿಗೆ ಮೀಸಲಾಗಿರುವ 4,500 ವರ್ಷಗಳಷ್ಟು ಹಳೆಯದಾದ ದೇವಾ ಲಯವನ್ನು ಕಂಡುಹಿಡಿದಿದ್ದಾರೆ. ಐದನೇ ರಾಜವಂಶದ ಫೇರೋ ರಾಜ ನೆಸೆರೆ ದೇವಾಲಯದಲ್ಲಿ ಕೆಲಸ ಮಾಡುತ್ತಿರುವ ಜಂಟಿ ಇಟಾಲಿಯನ್ ಮತ್ತು ಪೋಲಿಷ್ ಪುರಾತತ್ತ್ವ ಶಾಸ್ತ್ರದ ಕಾರ್ಯಾಚರಣೆಯಿಂದ ಈ ಆವಿಷ್ಕಾರವನ್ನು ಮಾಡಲಾಗಿದೆ. ಈಜಿಪ್ಟ್ ತನ್ನ ಪಿರಮಿಡ್‌ಗಳು, ಮಮ್ಮಿಗಳು ಮತ್ತು ಸಮಾಧಿಗಳಿಗೆ ಹೆಸರುವಾಸಿಯಾಗಿದೆ. ಆದರೆ, ಈ ಸೂರ್ಯ ದೇವಾಲಯದ ಆವಿಷ್ಕಾರವು ಪ್ರಾಚೀನ ಈಜಿಪ್ಟ್‌ನಲ್ಲಿ ಜೀವನ, ಶಕ್ತಿ ಮತ್ತು ಆಕಾಶ ಶಕ್ತಿಗಳು ಎಷ್ಟು ಆಳವಾಗಿ ಮುಖ್ಯವಾಗಿದ್ದವು ಎಂಬುದನ್ನು ತೋರಿಸುತ್ತದೆ.

ತಜ್ಞರ ಪ್ರಕಾರ, ಈ ದೇವಾಲಯವು ಈಜಿಪ್ಟ್‌ನ ಐದನೇ ರಾಜವಂಶದ (ಕ್ರಿ.ಪೂ. 2465-2323) ಕಾಲದ್ದಾಗಿದೆ. ಇದನ್ನು ಕ್ರಿ.ಪೂ. 2420ರಿಂದ 2389ರವರೆಗೆ ಆಳಿದ ದೊರೆ ಫರೋ ನೆಸೆರೆ I ನಿರ್ಮಿಸಿದ್ದಾನೆಂದು ನಂಬಲಾಗಿದೆ. ಆ ಸಮಯದಲ್ಲಿ, ಸೂರ್ಯ ದೇವರು ರಾ ಬ್ರಹ್ಮಾಂಡದ ಸೃಷ್ಟಿಕರ್ತ ಎಂದು ಪರಿಗಣಿಸಲಾಗಿತ್ತು. ಅದಕ್ಕಾಗಿಯೇ ಸೂರ್ಯ ದೇವಾಲಯಗಳು ಕೇವಲ ಪೂಜಾ ಸ್ಥಳಗಳಾಗಿರಲಿಲ್ಲ. ಅವು ಶಕ್ತಿ ಮತ್ತು ನ್ಯಾಯಸಮ್ಮತತೆಯ ಸಂಕೇತಗಳೂ ಆಗಿದ್ದವು. ಈ ಆವಿಷ್ಕಾರವು ರಾಜಕೀಯ, ಧರ್ಮ ಮತ್ತು ದೇವರುಗಳು ಹೆಣೆದುಕೊಂಡಿವೆ ಎಂಬುದಕ್ಕೆ ಪುರಾವೆಗಳನ್ನು ಒದಗಿಸುತ್ತದೆ. ಉತ್ಖನನದ ಸಮಯದಲ್ಲಿ ದೇವಾಲಯದ ಒಳಗೆ ಕಲ್ಲಿನ ಮೇಲೆ ಕೆತ್ತಿದ ಧಾರ್ಮಿಕ ಕ್ಯಾಲೆಂಡರ್ ಕೂಡ ಕಂಡುಬಂದಿದೆ.

ಇದು ಸೋಕರ್, ಮಿನ್ ಮತ್ತು ರಾ ಜೊತೆ ಸಂಬಂಧಿಸಿದ ಹಬ್ಬಗಳನ್ನು ಉಲ್ಲೇಖಿಸುತ್ತದೆ. ಅತ್ಯಂತ ಆಸಕ್ತಿದಾಯಕ ವಿಷಯವೆಂದರೆ ದೇವಾಲಯದ ಛಾವಣಿಯನ್ನು ನಕ್ಷತ್ರಗಳು ಮತ್ತು ಗ್ರಹಗಳನ್ನು ಅಧ್ಯಯನ ಮಾಡಲು ಬಳಸಲಾಗುತ್ತಿತ್ತು. ಈ ಸೂರ್ಯ ದೇವಾಲಯವು ಕೇವಲ ಧಾರ್ಮಿಕ ಸ್ಥಳವಾಗಿರಲಿಲ್ಲ. ಇದು ಪ್ರಾಚೀನ ಈಜಿಪ್ಟ್‌ನಲ್ಲಿ ಖಗೋಳಶಾಸ್ತ್ರದ ಪ್ರಮುಖ ಕೇಂದ್ರವಾಗಿತ್ತು ಎಂದು ಸ್ಪಷ್ಟವಾಗಿ ಸೂಚಿಸುತ್ತದೆ. ಈಜಿಪ್ಟಿನವರು ಆಕಾಶ, ಸಮಯ ಮತ್ತು ಹವಾಮಾನದ ಬಗ್ಗೆಯೂ ತಿಳಿದಿದ್ದರು ಎಂಬುದು ಇದರರ್ಥ. ಈ ದೇವಾಲಯವು ಸುಮಾರು 10,000 ಚದರ ಅಡಿ ವಿಸ್ತೀರ್ಣವನ್ನು ಹೊಂದಿದೆ. ಇದರ ಭವ್ಯತೆಯು ಬಿಳಿ ಸುಣ್ಣದ ಕಲ್ಲಿನ ಕೆತ್ತನೆಗಳು, ಗ್ರಾನೈಟ್ ಸ್ತಂಭಗಳು, ಉದ್ದವಾದ ಕಾರಿಡಾರ್‌ಗಳು ಮತ್ತು ಛಾವಣಿಗೆ ಕರೆದೊಯ್ಯುವ ಮೆಟ್ಟಿಲುಗಳಲ್ಲಿ ಸ್ಪಷ್ಟವಾಗಿ ಕಂಡುಬರುತ್ತದೆ. ಪ್ರಾಚೀನ ಈಜಿಪ್ಟಿನ ಸೆನೆಟ್ಕಾ ಮಡಿಕೆಗಳು, ಬಿಯರ್ ಗ್ಲಾಸ್‌ಗಳು ಮತ್ತು ಮರದ ತುಣುಕುಗಳು ಸಹ ದೇವಾಲಯದಲ್ಲಿ ಕಂಡುಬಂದಿವೆ.

4,500 ವರ್ಷಗಳಷ್ಟು ಹಳೆಯದಾದ ಈ ಸೂರ್ಯ ದೇವಾಲಯವು ಈಜಿಪ್ಟ್ ಕೇವಲ ಸಮಾಧಿಗಳ ನಾಗರಿಕತೆ ಎಂಬ ಕಲ್ಪನೆಯನ್ನು ಪ್ರಶ್ನಿಸುತ್ತದೆ. ಪ್ರಾಚೀನ ಈಜಿಪ್ಟ್ ಜೀವನ, ಶಕ್ತಿ, ವಿಜ್ಞಾನ ಮತ್ತು ಬ್ರಹ್ಮಾಂಡದ ಆಳವಾದ ತಿಳುವಳಿಕೆಯನ್ನು ಹೊಂದಿರುವ ಹೆಚ್ಚು ಅಭಿವೃದ್ಧಿ ಹೊಂದಿದ ಸಂಸ್ಕೃತಿಯಾಗಿತ್ತು ಎಂಬುದನ್ನು ಈ ಆವಿಷ್ಕಾರವು ಬಹಿರಂಗಪಡಿಸುತ್ತದೆ.

## ಕರ್ನಾಟಕ ಮಾದರಿ: ರಾಗಾ - 'ಮೇಕ್ ಇನ್ ಇಂಡಿಯಾ ಎಫೆಕ್ಟ್': ಕೇಂದ್ರ ಸಚಿವ

**ನವದೆಹಲಿ:** ಬೆಂಗಳೂರಿನ ಬಳಿ ಫಾಕ್ಸ್ ಕಾನ್ ಬೃಹತ್ ಘಟಕ ಸ್ಥಾಪಿಸಿ 9 ತಿಂಗಳಲ್ಲಿ 30,000 ಮಂದಿಯನ್ನು ನೇಮಕಾತಿ ಮಾಡಿಕೊಂಡ ಸುದ್ದಿಯನ್ನು ಹಂಚಿಕೊಂಡು, ಕರ್ನಾಟಕದ ಮಾದರಿ ಹಾಕಿಕೊಟ್ಟಿದೆ ಎಂದಿದ್ದ ರಾಹುಲ್ ಗಾಂಧಿಗೆ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಅವರು ಇದು ಮೇಕ್ ಇನ್ ಇಂಡಿಯಾ ಯೋಜನೆ ಫಲ ಎಂದು ನೆನಪಿಸಿದ್ದಾರೆ. ನರೇಂದ್ರ ಮೋದಿ ಸರ್ಕಾರದ ಮೇಕ್ ಇನ್ ಇಂಡಿಯಾವನ್ನು ಗುರುತಿಸಿದ್ದಕ್ಕೆ ಧನ್ಯವಾದ ಎಂದು ರಾಹುಲ್ ಗಾಂಧಿಗೆ ಪರೋಕ್ಷವಾಗಿ ಟಾಂಟ್ ಕೊಟ್ಟಿದ್ದಾರೆ ಕೇಂದ್ರ ಸಚಿವರು. ಕೇವಲ 8-9 ತಿಂಗಳಲ್ಲಿ 30,000 ಉದ್ಯೋಗಿಗಳನ್ನು ನೇಮಕ ಮಾಡಿಕೊಳ್ಳಲಾಗಿದೆ. ಭಾರತದಲ್ಲಿ ಈವರೆಗೂ ಇಷ್ಟು ವೇಗದಲ್ಲಿ ಫ್ಯಾಕ್ಟರಿ ನೇಮಕಾತಿ ಆಗಿದ್ದಿಲ್ಲ. ಇದು ಕೇವಲ ಅಂಕಿ ಅಂಶ ಅಲ್ಲ. ಪರಿವರ್ತನಾತ್ಮಕ ಉದ್ಯೋಗ ಸೃಷ್ಟಿ ಇದು.





ಈ ಘಟಕದಲ್ಲಿ ಶೇ. 80ರಷ್ಟು ಮಹಿಳೆಯರೇ ಇರುವುದು, ಅದರಲ್ಲೂ 19-24ರ ವಯಸ್ಸಿನಲ್ಲಿರುವ, ಮೊದಲ ಬಾರಿಗೆ ಕೆಲಸ ಮಾಡುತ್ತಿರುವ ಯುವತಿಯರೇ ಇದ್ದಾರೆ. ಹೀಗಾಗಿ, ಈ ಉದ್ಯೋಗಸೃಷ್ಟಿ ಇನ್ನೂ ಪ್ರಬಲವೆನಿಸುತ್ತದೆ' ಎಂದು ಕಾಂಗ್ರೆಸ್ ನಾಯಕ ತಮ್ಮ ಎಕ್ಸ್ ಪೋಸ್ಟ್‌ನಲ್ಲಿ ಹೇಳಿದ್ದರು.

'ಈ ಮಟ್ಟದಲ್ಲಿ ಮತ್ತು ವೇಗದಲ್ಲಿ ಉತ್ಪಾದನಾ ವಲಯ ಬೆಳೆಯಬಲ್ಲಂತಹ ಇಕೋಸಿಸ್ಟಂ ಅನ್ನು ನಿರ್ಮಿಸುವ ಮೂಲಕ ಕರ್ನಾಟಕವು ಒಂದು ಮಾದರಿ ಹಾಕಿಕೊಟ್ಟಿದೆ. ಗೌರವದ ಕೆಲಸ ಮತ್ತು ಸರ್ವರಿಗೂ ಅವಕಾಶ.. ಇಂಥ ಭಾರತವನ್ನು ನಾವು ಕಟ್ಟಬೇಕಿರುವುದು' ಎಂದು ರಾಹುಲ್ ಗಾಂಧಿ ಕರೆ ನೀಡಿದ್ದರು. ಇದಕ್ಕೆ ಪ್ರತಿಕ್ರಿಯಿಸಿರುವ ಅಶ್ವಿನಿ ವೈಷ್ಣವ್, 'ನರೇಂದ್ರ ಮೋದಿ ಅವರ ಮೇಕ್ ಇನ್ ಇಂಡಿಯಾ ಯೋಜನೆಯ ಯಶಸ್ಸನ್ನು ಗುರುತಿಸಿದ್ದಕ್ಕೆ ಧನ್ಯವಾದ. ನೀವು ಗಮನಿಸಿದಂತೆ, ನಮ್ಮ ಪ್ರಧಾನಿಗಳ ದೃಷ್ಟಿಯಂತೆ ನಾವು ಉತ್ಪಾದಕ ಆರ್ಥಿಕತೆಯಾಗಿ ಬೆಳೆಯುತ್ತಿದ್ದೇವೆ' ಎಂದಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.